ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೬೮

**ಪಟ್ಟಿ – ೦೫**

# ಕರ್ನಾಟಕ ವಿಧಾನ ಪರಿಷತ್ತು

**ನೂರ ಮೂವತ್ತೆಂಟನೆಯ ಅಧಿವೇಶನ**

**ಶುಕ್ರವಾರ, ದಿನಾಂಕ : ೧೯ನೇ ಜುಲೈ, ೨೦೧೯**

---

## ಸಮೂಹ – V

೧. ಉಪ ಮುಖ್ಯಮಂತ್ರಿಗಳು.

೨. ಗೃಹ ಸಚಿವರು.

೩. ಲೋಕೋಪಯೋಗಿ ಸಚಿವರು.

೪. ಪೌರಾಡಳಿತ ಮತ್ತು ಸ್ಥಳೀಯ ಸಂಸ್ಥೆಗಳ ಸಚಿವರು.

೫. ನಗರಾಭಿವೃದ್ಧಿ ಸಚಿವರು.

೬. ವಸತಿ ಸಚಿವರು.

೭. ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳು, ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು.

---

## ರಾಜ್ಯ ಹೆದ್ದಾರಿಗಳನ್ನು ರಾಷ್ಟ್ರೀಯ ಹೆದ್ದಾರಿಗಳನ್ನಾಗಿ ಪರಿವರ್ತಿಸುವ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೫೩ (೫೬೧) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಇತ್ತೀಚೆಗೆ ರಾಜ್ಯದ ಯಾವ ಯಾವ ರಾಜ್ಯ ಹೆದ್ದಾರಿಗಳನ್ನು ರಾಷ್ಟ್ರೀಯ ಹೆದ್ದಾರಿಗಳನ್ನಾಗಿ ಪರಿವರ್ತಿಸಲು ಅಥವಾ ಮೇಲ್ದರ್ಜೆಗೇರಿಸಲು ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು ಮಾಡಲಾಗಿದೆ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು ಮಾಡಿರುವ ರಾಷ್ಟ್ರೀಯ ಹೆದ್ದಾರಿಗಳು ಎಷ್ಟು ಕಿ.ಮೀ. ಒಳಗೊಂಡಿರುತ್ತದೆ ; ಇದಕ್ಕೆ ಅಂದಾಜಿಸಿರುವ ಅನುದಾನವೆಷ್ಟು ; (ವಿವರ ನೀಡುವುದು)

(ಇ) ಕಳೆದ ೩ ವರ್ಷಗಳಿಂದೀಚೆಗೆ ಕೇಂದ್ರ ಸರ್ಕಾರವು ರಾಜ್ಯದ ಎಷ್ಟು ರಾಷ್ಟ್ರೀಯ ಹೆದ್ದಾರಿಗಳನ್ನು ಮಂಜೂರು ಮಾಡಿದೆ ; ಆ ರಾಷ್ಟ್ರೀಯ ಹೆದ್ದಾರಿಗಳು ಯಾವುವು ; ಇದಕ್ಕೆ ಎಷ್ಟು ಅನುದಾನವನ್ನು ಒದಗಿಸಿ ಆಡಳಿತಾತ್ಮಕ ಅನುಮೋದನೆ ನೀಡಿದೆ ? (ಸಂಪೂರ್ಣ ಮಾಹಿತಿಯನ್ನು ಆದೇಶದ ಪ್ರತಿಯೊಂದಿಗೆ ನೀಡುವುದು)

## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಅನಧಿಕೃತ ಕಲ್ಯಾಣ ಮಂಟಪಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೫೪ (೫೬೨) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಕನ್‌ವೆನ್ಷನ್ ಹಾಲ್‌ಗಳೂ ಸೇರಿದಂತೆ ಒಟ್ಟು ಎಷ್ಟು ಖಾಸಗಿ ಕಲ್ಯಾಣ ಮಂಟಪಗಳಿವೆ ; ಈ ಪೈಕಿ ಅಧಿಕೃತ ಮತ್ತು ಅನಧಿಕೃತ ಕಲ್ಯಾಣ ಮಂಟಪಗಳೆಷ್ಟು ; (ವಿಧಾನಸಭಾ ಕ್ಷೇತ್ರವಾರು ವಿವರ ನೀಡುವುದು)

(ಆ) ಈ ಕಲ್ಯಾಣ ಮಂಟಪಗಳು ದಿನವೊಂದಕ್ಕೆ ವಿಧಿಸುತ್ತಿರುವ ಬಾಡಿಗೆ ಹಣ ಎಷ್ಟು ಬಾಡಿಗೆ ನಿಗಧಿಪಡಿಸುವ ಕುರಿತು ನಿಯಮಗಳು ಇವೆಯೇ ; ಈ ಕಲ್ಯಾಣ ಮಂಟಪಗಳಿಂದ ಸರ್ಕಾರಕ್ಕೆ ಬರುತ್ತಿರುವ ವರಮಾನ ಎಷ್ಟು ; (ವಿವರ ನೀಡುವುದು)

(ಇ) ಕೆಲವು ಕಲ್ಯಾಣ ಮಂಟಪಗಳು ಹೆಚ್ಚಿನ ಬಾಡಿಗೆ ನಿಗದಿಪಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಈ ಕಲ್ಯಾಣ ಮಂಟಪಗಳ ವಿರುದ್ಧ ಕೈಗೊಂಡಿರುವ ಕ್ರಮಗಳೇನು ;

(ಈ) ಕಲ್ಯಾಣ ಮಂಟಪಗಳನ್ನು ಮದುವೆ ಸೇರಿದಂತೆ ಇತರೆ ಸಮಾರಂಭಗಳಿಗೆ ಬಾಡಿಗೆಗೆ ನೀಡುವಾಗ ಕೆಲವು ಕಲ್ಯಾಣ ಮಂಟಪಗಳ ಆಡಳಿತ ಮಂಡಳಿಗಳು ಹೂವಿನ ಅಲಂಕಾರ ಸೇರಿದಂತೆ ಸ್ಟೇಜ್ ನಿರ್ಮಾಣ ಕೆಲಸವನ್ನು ತಾವು ಹೇಳಿದ ವ್ಯಕ್ತಿಗಳಿಗೆ ನೀಡಬೇಕೆಂದು ಸೂಚನೆ ನೀಡುತ್ತಿದ್ದು, ಈ ರೀತಿ ಸೂಚನೆ ನೀಡಲು ಅವರಿಗೆ ಅವಕಾಶ ನೀಡಲಾಗಿದೆಯೇ ; (ಹಾಗಿದ್ದಲ್ಲಿ ಆದೇಶದ ಪ್ರತಿ ನೀಡುವುದು)

(ಉ) ಇಲ್ಲದಿದ್ದಲ್ಲಿ, ಇಂತಹ ಕಲ್ಯಾಣ ಮಂಟಪಗಳ ವಿರುದ್ಧ ಕ್ರಮಕೈಗೊಳ್ಳುವುದರ ಜೊತೆಗೆ ಎಲ್ಲಾ ಕಲ್ಯಾಣ ಮಂಟಪಗಳಲ್ಲೂ ಈ ಕುರಿತು ನಾಮಫಲಕ ಅಳವಡಿಸುವಂತೆ ಸೂಚನೆ ನೀಡುವ ಕುರಿತು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ಘಟಿಕೋತ್ಸವ ಪ್ರಮಾಣ ಪತ್ರಗಳ ವಿತರಣೆ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೫೫ (೫೬೪) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹುಬ್ಬಳ್ಳಿಯ ಕರ್ನಾಟಕ ಕಾನೂನು ವಿಶ್ವವಿದ್ಯಾಲಯದಿಂದ ಪ್ರತಿ ವರ್ಷ ಕಾನೂನು ಪದವಿಯಲ್ಲಿ ತೇರ್ಗಡೆಯಾದ ವಿದ್ಯಾರ್ಥಿಗಳಿಗೆ ಎಷ್ಟು ದಿನಗಳೊಳಗಾಗಿ ಘಟಿಕೋತ್ಸವ ಪ್ರಮಾಣ ಪತ್ರಗಳನ್ನು ವಿತರಿಸಲಾಗುತ್ತಿದೆ ; (ಕಳೆದ ೫ ವರ್ಷಗಳ ಅವಧಿಯಲ್ಲಿ ಘಟಿಕೋತ್ಸವ ನಡೆದಿರುವ ಮಾಹಿತಿಯನ್ನು ಒದಗಿಸುವುದು)

(ಆ) ಹುಬ್ಬಳ್ಳಿಯ ಕರ್ನಾಟಕ ಕಾನೂನು ವಿಶ್ವವಿದ್ಯಾಲಯದಿಂದ ಕಾನೂನು ಪದವಿ (ಎಲ್.ಎಲ್.ಬಿ) ಪಡೆದ ವಿದ್ಯಾರ್ಥಿಗಳಿಗೆ ಘಟಿಕೋತ್ಸವ ಪ್ರಮಾಣ ಪತ್ರವನ್ನು ೨೦೧೬–೧೭ನೇ ಸಾಲಿನಿಂದ ಪ್ರಸ್ತುತ ಇಲ್ಲಿಯವರೆವಿಗೂ ನೀಡದೆ ವಿಳಂಬವಾಗುತ್ತಿರುವುದಕ್ಕೆ ಕಾರಣಗಳೇನು ;

(ಇ) ಕಾನೂನು ಪದವಿ ಪಡೆದವರಿಗೆ ಘಟಿಕೋತ್ಸವ ಪ್ರಮಾಣ ಪತ್ರ ನೀಡದೆ ವಕೀಲ ವೃತ್ತಿಯನ್ನು ಪ್ರಾರಂಭಿಸಲು ಹಾಗೂ ಸರ್ಕಾರಿ ಕಛೇರಿಗಳಲ್ಲಿ ಬಡ್ತಿ ಪಡೆಯಲು ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಘಟಿಕೋತ್ಸವ ಪ್ರಮಾಣ ಪತ್ರಗಳನ್ನು ಎಷ್ಟು ದಿನಗಳಲ್ಲಿ ನೀಡಲಾಗುವುದು ?

## ಕಳಪೆ ಗುಣಮಟ್ಟದ ಕಾಮಗಾರಿಯ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೫೬ (೫೬೫) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಾಮರಾಜನಗರ–ಹುಮನಾಬಾದ್ ರಾಷ್ಟ್ರೀಯ ಹೆದ್ದಾರಿ ೧೫೦–ಎ ಸಂಪರ್ಕ ಕಲ್ಪಿಸುವ ನಾಗಮಂಗಲ ತಾಲ್ಲೂಕು ವ್ಯಾಪ್ತಿಯಲ್ಲಿ ನಡೆಯುತ್ತಿರುವ ಕಾಮಗಾರಿ ತುಂಬಾ ಕಳಪೆ ಗುಣಮಟ್ಟದಿಂದ ಕೂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸದರಿ ಕಾಮಗಾರಿಗೆ ಸರ್ಕಾರದ ವತಿಯಿಂದ ಟೆಂಡರ್ ಅಧಿಸೂಚನೆ ಪ್ರಕಾರ ನಿಗದಿಯಾಗಿರುವ ಮೊತ್ತವೆಷ್ಟು ; ಇ–ಟೆಂಡರ್‌ನಲ್ಲಿ ಅಂತಿಮವಾಗಿ ಆಯ್ಕೆಯಾದ ಗುತ್ತಿಗೆದಾರರು ನಮೂದಿಸಿದ ಮೊತ್ತವೆಷ್ಟು ; (ವಿವರವಾದ ಅಧಿಸೂಚನೆ ಹಾಗೂ ಟೆಂಡರ್‌ದಾರರು ಸಲ್ಲಿಸಿದ ದಾಖಲೆಗಳ ವಿವರ ನೀಡುವುದು)

(ಇ) ಸರ್ಕಾರಿ ನಿಗದಿಪಡಿಸಿದ ಟೆಂಡರ್ ಮೊತ್ತಕ್ಕಿಂತ ಗುತ್ತಿಗೆದಾರರು ಕಡಿಮೆ ಮೊತ್ತವನ್ನು ಸದರಿ ಕಾಮಗಾರಿಗೆ ನಮೂದಿಸಿದ್ದಾರೆಯೇ; ಹಾಗಿದ್ದಲ್ಲಿ, ಸದರಿ ಕಾಮಗಾರಿಯನ್ನು ಸರ್ಕಾರ ನಿಗದಿ ಮಾಡಿದ ಮೊತ್ತಕ್ಕಿಂತ ಕಡಿಮೆ ದರದಲ್ಲಿ ಕಾಮಗಾರಿ ಪೂರೈಸುವಾಗ ಸರ್ಕಾರದ ಪರವಾಗಿ ಕರ್ತವ್ಯ ನಿರ್ವಹಿಸುವ ಇಂಜಿನಿಯರ್‌ಗಳು ಈ ಕಾಮಗಾರಿ ಮೊತ್ತವನ್ನು ಟೆಂಡರ್ ಅಧಿಸೂಚನೆ ಹೊರಡಿಸುವಾಗ ಸರ್ಕಾರದ ಪರವಾಗಿ ಕೆಲಸ ಮಾಡದೆ, ಸರ್ಕಾರದ ಬೊಕ್ಕಸಕ್ಕೆ ನಷ್ಟವುಂಟು ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ, ಸರ್ಕಾರದ ಬೊಕ್ಕಸಕ್ಕೆ ನಷ್ಟವುಂಟು ಮಾಡಿರುವ ಈ ಅಧಿಕಾರಿಗಳ ವಿರುದ್ಧ ಯಾವ ಶಿಸ್ತು ಕ್ರಮ ಕೈಗೊಳ್ಳಲಾಗಿದೆ ? (ವಿವರವಾದ ಮಾಹಿತಿ ನೀಡುವುದು)

# ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಅಕ್ರಮವಾಗಿ ಜಮೀನನ್ನು ಅಸೋಸಿಯೇಷನ್‌ಗೆ ನೀಡಿರುವ ಬಗ್ಗೆ

**ಶ್ರೀ ಆಯನೂರು ಮಂಜುನಾಥ್ (ಪದವೀಧರರ ಕ್ಷೇತ್ರ):–**

೩೫೭ (೪೩೭) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ:–

(ಅ) ನಗರಾಭಿವೃದ್ಧಿ ಇಲಾಖೆಯಿಂದ ಸುವರ್ಣ ಕರ್ನಾಟಕ ರಾಜ್ಯೋತ್ಸವದಡಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಯಾವ ಸಂಘಕ್ಕೆ ಸಗಟು ಹಂಚಿಕೆ ಮಾಡಬೇಕೆಂದು ಆದೇಶವಾಗಿರುತ್ತದೆ; (ಪ್ರತಿ ಒದಗಿಸುವುದು)

(ಆ) ಸದರಿ ಆದೇಶದಂತೆ ಪ್ರಾಧಿಕಾರದಿಂದ ಯಾವ ಸಂಘಕ್ಕೆ ಜಮೀನು ಬಿಡುಗಡೆಯಾಗಿದೆ ಮತ್ತು ಯಾವ ಸಂಘಕ್ಕೆ ನೋಂದಣಿಯಾಗಿದೆ; (ಬಿಡುಗಡೆ ಪ್ರತಿ ಮತ್ತು ನೋಂದಣಿ ಪ್ರತಿ ನೀಡುವುದು) ಒಂದು ಸಂಘಕ್ಕೆ ಜಮೀನು ಬಿಡುಗಡೆಗೊಳಿಸಿ ಮತ್ತೊಂದು ಸಂಘಕ್ಕೆ ನೋಂದಾಯಿಸಲು ಕಾರಣವೇನು ;

(ಇ) ದೊಡ್ಡಕಲ್ಲಸಂದ್ರ ಗ್ರಾಮದ ಸರ್ವೆ ನಂ. ೧೯(ಪಿ)ರಲ್ಲಿ ೧ ಎಕರೆ ೨೮ ಗುಂಟೆ ಜಮೀನನ್ನು ಸಂಘಕ್ಕೆ ನೋಂದಾಯಿತ ಕ್ರಯಪತ್ರ ಮಾಡಿಕೊಡದೆ ಅಕ್ರಮವಾಗಿ ಪರಿಷ್ಕೃತ ಬಡಾವಣೆ ನಕ್ಷೆಯಲ್ಲಿ ಸೇರಿಸಲು ಕಾರಣರಾದವರ ವಿರುದ್ಧ ಕೈಗೊಂಡ ಕ್ರಮಗಳೇನು ;

(ಈ) ಸದರಿ ಗ್ರಾಮದಲ್ಲಿ ೩೩ ಎಕರೆ ೦೨ ಗುಂಟೆ ಜಮೀನಿಗೆ ಕ್ರಯಪತ್ರ ನೋಂದಾಯಿಸಿ, ಪುನಃ ಸರ್ವೆ ಕಾರ್ಯ ನಡೆಸಿ ಲಭ್ಯವಿದ್ದ ಜಮೀನು ೨೭ ಎಕರೆ ೧೫ ಗುಂಟೆ ಎಂದು ತಿದ್ದುಪಡಿ ಕ್ರಯಪತ್ರ ನೋಂದಾಯಿಸಲಾಗಿದೆಯೇ ; ಹಾಗಿದ್ದಲ್ಲಿ, ಸರ್ವೆ ವರದಿ ನೀಡುವುದು ; ಇಲ್ಲದಿದ್ದಲ್ಲಿ ಸರ್ವೆ ಕಾರ್ಯ ಕೈಗೊಳ್ಳದೇ ಜಮೀನು ಕಡಿಮೆಯಿದೆ ಎಂದು ಹೇಗೆ ನಿರ್ಧರಿತವಾಗಿದೆ ;

(ಉ) ಪ್ರಾಧಿಕಾರದ ನೌಕರರನ್ನು ಹೊರತುಪಡಿಸಿ ಇತರರಿಗೆ ನಿವೇಶನ ಹಂಚಿಕೆಯಾಗಲು ಆದೇಶವಾಗಿದೆಯೇ ; ಇದ್ದಲ್ಲಿ, ಪ್ರತಿ ಒದಗಿಸುವುದು ; ಇಲ್ಲದಿದ್ದಲ್ಲಿ, ಈ ಅಕ್ರಮಕ್ಕೆ ಕಾರಣರಾದವರ ವಿರುದ್ಧ ಕೈಗೊಂಡ ಕ್ರಮಗಳೇನು ?

## ಲಿಂಗಧೀರನಹಳ್ಳಿ ಬಡಾವಣೆಯಲ್ಲಿ ಸಿ.ಎ. ನಿವೇಶನವನ್ನು ಬಿಡಿಎ ರಕ್ಷಿಸಿಕೊಳ್ಳದ ಬಗ್ಗೆ

**ಶ್ರೀ ಆಯನೂರು ಮಂಜುನಾಥ್ (ಪದವೀಧರರ ಕ್ಷೇತ್ರ):–**

೩೫೮ (೪೩೮) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ನೌಕರರ ಕ್ಷೇಮಾಭಿವೃದ್ಧಿ ಸಂಘಕ್ಕೆ ಲಿಂಗಧೀರನಹಳ್ಳಿ ಗ್ರಾಮದ ಸರ್ವೆ ನಂ. ೧/೪, ೭/೧, ೭/೫, ೭/೬, ೭/೮ & ೭/೯ ರಲ್ಲಿನ ಜಮೀನುಗಳನ್ನು ನೋಂದಾಯಿತ ಕ್ರಯಪತ್ರ ಮಾಡಿಕೊಡದೇ ಸದರಿ ಜಮೀನುಗಳನ್ನು ಪರಿಷ್ಕೃತ ಬಡಾವಣೆ ನಕ್ಷೆಯಲ್ಲಿ ಸೇರಿಸಲು ಅವಕಾಶವಿದೆಯೇ ; ಇಲ್ಲದಿದ್ದಲ್ಲಿ, ಈ ಅಕ್ರಮಕ್ಕೆ ಕಾರಣರಾದ ನೌಕರರ ವಿರುದ್ಧ ಕೈಗೊಂಡ ಕ್ರಮಗಳೇನು ;

(ಆ) ಪ್ರಾಧಿಕಾರದ ನಿಯಮಾವಳಿಗಳನ್ವಯ ಸಿ.ಎ. ನಿವೇಶನಗಳನ್ನು ಹಂಚಿಕೆ ಮಾಡಲು ಕೈಗೊಳ್ಳುವ ಪ್ರಕ್ರಿಯೆಯ ವಿಧಾನಗಳಾವುವು; (ನಿಯಮದ ಪ್ರತಿ ಒದಗಿಸುವುದು)

(ಇ) ಲಿಂಗಧೀರನಹಳ್ಳಿ ಬಡಾವಣೆಯ ಸುಮಾರು ಒಂದು ಎಕರೆ ವಿಸ್ತೀರ್ಣದ ಸಿ.ಎ. ನಿವೇಶನವನ್ನು ಯಾರಿಗೆ ಹಂಚಿಕೆ ಮಾಡಲಾಗಿದೆ; (ಪ್ರಾಧಿಕಾರದ ಮಂಡಳಿ ಸಭೆಯಲ್ಲಿ ಅನುಮತಿಸಿದ ಠರಾವಿನ ಪ್ರತಿ ಒದಗಿಸುವುದು ಮತ್ತು ಗುತ್ತಿಗೆ ಕರಾರುಪತ್ರ ಒದಗಿಸುವುದು)

(ಈ) ಸಿ.ಎ. ನಿವೇಶನವನ್ನು ಪರಿತ್ಯಜನ ಪತ್ರದ ಮೂಲಕ ಪ್ರಾಧಿಕಾರಕ್ಕೆ ನೋಂದಾಯಿಸಿ, ನಂತರ ಸಂಘದವರು ಖಾಸಗಿಯವರಿಗೆ ೩೦ ವರ್ಷಗಳ ಗುತ್ತಿಗೆ ಕರಾರು ಪತ್ರವನ್ನು ನೋಂದಾಯಿಸಲು ಅವಕಾಶವಿದೆಯೇ ; ಇಲ್ಲದಿದ್ದಲ್ಲಿ, ಸಂಘದವರು ಗುತ್ತಿಗೆ ಕರಾರುಪತ್ರವನ್ನು ನೋಂದಾಯಿಸಿರುವುದು ನಿಜವೇ ; ನೋಂದಾಯಿಸಿದ್ದಲ್ಲಿ ಕೈಗೊಂಡಿರುವ ಕ್ರಮಗಳೇನು ;

(ಉ) ಸದರಿ ಬಡಾವಣೆಯ ಅಕ್ರಮಗಳ ಬಗ್ಗೆ ಪ್ರಾಧಿಕಾರದ ಜಾಗೃತದಳದ ಎಸ್.ಪಿ.ರವರು ತನಿಖಾ ವರದಿಯನ್ನು ಸಲ್ಲಿಸಿರುವುದು ನಿಜವೇ ; (ಪ್ರತಿ ಒದಗಿಸುವುದು) ಅಕ್ರಮಗಳಲ್ಲಿ ಭಾಗಿಯಾದವರ ವಿರುದ್ಧ ಕ್ರಿಮಿನಲ್ ಕೇಸ್ ದಾಖಲಿಸಬೇಕೆಂದು ಆಯುಕ್ತರು ಸೂಚಿಸಿರುವುದು ನಿಜವೇ ; ಇದ್ದಲ್ಲಿ ಕೈಗೊಂಡ ಕ್ರಮಗಳೇನು ?

## ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಎಂಪ್ಲಾಯೀಸ್ ವೆಲ್‌ಫೇರ್ ಅಸೋಸಿಯೇಷನ್ ಸಂಘದ ಅವ್ಯವಹಾರಗಳ ಬಗ್ಗೆ

**ಶ್ರೀ ಆಯನೂರು ಮಂಜುನಾಥ್ (ಪದವೀಧರರ ಕ್ಷೇತ್ರ):–**

೩೫೯ (೪೩೯) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಎಂಪ್ಲಾಯೀಸ್ ವೆಲ್‌ಫೇರ್ ಅಸೋಸಿಯೇಶನ್ (ರಿ) ನಲ್ಲಿ ಅವ್ಯವಹಾರಗಳು ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಆ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ನೌಕರರಿಗೆ ನಿವೇಶನ ಹಂಚಿಕೆ ಮಾಡುವ ಉದ್ದೇಶಕ್ಕಾಗಿ ಎಂಪ್ಲಾಯೀಸ್ ವೆಲ್‌ಫೇರ್ ಅಸೋಸಿಯೇಶನ್‌ಗೆ ಭೂಮಿಯನ್ನು ಮಂಜೂರು ಮಾಡಲಾಗಿದೆಯೇ ; (ವಿವರ ನೀಡುವುದು)

(ಇ) ಇಲ್ಲವಾದಲ್ಲಿ, ಎಂಪ್ಲಾಯೀಸ್ ವೆಲ್‌ಫೇರ್ ಅಸೋಸಿಯೇಷನ್ ನೌಕರರಿಗೆ ಮತ್ತು ಇತರರಿಗೆ ನಿವೇಶನ ಹಂಚಿಕೆ ಮಾಡಿರುವ ಸರ್ಕಾರಿ ಭೂಮಿ ಯಾವುದು ? (ಸಂಪೂರ್ಣ ಮಾಹಿತಿ ನೀಡುವುದು)

## ಶಿವಮೊಗ್ಗ ತಾಲ್ಲೂಕು ಆಯನೂರು ಮತ್ತು ಕೋಹಳ್ಳಿ ಪಟ್ಟಣ ಪಂಚಾಯಿತಿ ಬಗ್ಗೆ

**ಶ್ರೀ ಆಯನೂರು ಮಂಜುನಾಥ್ (ಪದವೀಧರರ ಕ್ಷೇತ್ರ):–**

೩೬೦ (೪೪೦) ಮಾನ್ಯ ಪೌರಾಡಳಿತ ಮತ್ತು ಸ್ಥಳೀಯ ಸಂಸ್ಥೆಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಶಿವಮೊಗ್ಗ ತಾಲ್ಲೂಕು ಆಯನೂರು ಹೋಬಳಿಯ ಗ್ರಾಮವನ್ನು ಇಬ್ಭಾಗಿಸಿ ಆಯನೂರು ಹಾಗೂ ಕೋಹಳ್ಳಿ ಪಂಚಾಯಿತಿಗಳಾಗಿ ಇಬ್ಭಾಗಿಸಿರುವುದು ಸರ್ಕಾರದ ಗಮನದಲ್ಲಿದೆಯೇ ;

(ಆ) ರಾಷ್ಟ್ರೀಯ ಹೆದ್ದಾರಿ ಹಾದು ಹೋಗುವ ಹಾಗೂ ಹೋಬಳಿ ಕೇಂದ್ರವಾಗಿರುವ ಆಯನೂರು ಮತ್ತು ಕೋಹಳ್ಳಿ ಗ್ರಾಮ ಪಂಚಾಯಿತಿಗಳನ್ನು ಒಗ್ಗೂಡಿಸಿ ಆಯನೂರು ಪಟ್ಟಣ ಪಂಚಾಯಿತಿಯನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಇ) ಇದ್ದಲ್ಲಿ, ಯಾವಾಗ ಮಾಡಲಾಗುವುದು ; ಇಲ್ಲವಾದಲ್ಲಿ ಕೂಡಲೇ ಪರಿಗಣಿಸಲಾಗುವುದೇ ?

## ಶಿವಮೊಗ್ಗ ಮಹಾನಗರ ಪಾಲಿಕೆ ವಾರ್ಡ್ ಸಮಿತಿ ಹಾಗೂ ಏರಿಯಾ ಸಭೆಗಳ ಬಗ್ಗೆ

**ಶ್ರೀ ಆಯನೂರು ಮಂಜುನಾಥ್ (ಪದವೀಧರರ ಕ್ಷೇತ್ರ):–**

೩೬೧ (೪೪೧) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಶಿವಮೊಗ್ಗ ಮಹಾನಗರ ಪಾಲಿಕೆಯ ಮಹಾನಗರ ಪಾಲಿಕೆ ಕಾಯ್ದೆ ಅನ್ವಯ ವಾರ್ಡ್ ಸಮಿತಿ ಹಾಗೂ ಏರಿಯಾ ಸಭೆಗಳು ರಚನೆಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಯಾವಾಗ ರಚಿಸಲಾಗುವುದು ;

(ಆ) ಶಿವಮೊಗ್ಗ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಅಗ್ನಿಶಾಮಕ ಇಲಾಖೆಯಿಂದ ಅನುಮತಿ ಪಡೆಯದ ದೊಡ್ಡಕಟ್ಟಡಗಳು ಹಾಗೂ ನಕ್ಷೆಯಲ್ಲಿ ಪಾರ್ಕಿಂಗ್ ಎಂದು ತೋರಿಸಿ ಕಾನೂನು ಬಾಹಿರವಾಗಿ ವಾಣಿಜ್ಯ ವ್ಯವಹಾರ ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಆ ಎಲ್ಲಾ ಕಟ್ಟಡಗಳ ವಿವರವಾದ ಮಾಹಿತಿಯನ್ನು ನೀಡುವುದು ;

(ಇ) ಕಾನೂನು ಉಲ್ಲಂಘಿಸಿ ಕಟ್ಟಡ ನಿರ್ಮಿಸಿ ವ್ಯವಹರಿಸುತ್ತಿರುವ ಕಟ್ಟಡ ಮಾಲೀಕರ ಮೇಲೆ ಯಾವ ಕ್ರಮ ಕೈಗೊಳ್ಳಲಾಗುವುದು ಮತ್ತು ಯಾವಾಗ ?

## Ragvendra Auradkar ADGP ವೇತನ ವರದಿ ಬಗ್ಗೆ

**ಶ್ರೀ ಬಸವರಾಜ ಪಾಟೀಲ್ ಇಟಗಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೬೨ (೧೪೪) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಶ್ರೀ Ragvendra Auradkar ADGP ರವರು ಸಲ್ಲಿಸಿದ ಪೊಲೀಸ್ ಇಲಾಖೆ ವೇತನ ವರದಿಯನ್ನು ಸಲ್ಲಿಸಿದ್ದು ಯಾವಾಗ ;

(ಆ) ಸಲ್ಲಿಸಿದ್ದಲ್ಲಿ, ಯಾವಾಗ ಕ್ರಮ ಜರುಗಿಸಲಾಗುವುದು ?

## ದೇವದುರ್ಗ ತಾಲ್ಲೂಕಿನ Appendix-E ರಸ್ತೆ ಕಾಮಗಾರಿ ಬಗ್ಗೆ

**ಶ್ರೀ ಬಸವರಾಜ ಪಾಟೀಲ್ ಇಟಗಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೬೩ (೧೫) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ಜಿಲ್ಲೆ ದೇವದುರ್ಗ ತಾಲ್ಲೂಕಿನ ಮುಖ್ಯ ರಸ್ತೆಗಳಾದ ದೇವದುರ್ಗದಿಂದ ಗೂಗಲ್, ಹಾಗೂ ಗೂಗಲ್‌ನಿಂದ ಅರಕೇರಾ ಮಾರ್ಗದ ಸುಂಕೇಶ್ವರಾಳ ರಸ್ತೆಗಳ ಕಾಮಗಾರಿಗಳು ಸ್ಥಗಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸರ್ಕಾರವು ತೆಗೆದುಕೊಂಡ ಕ್ರಮವೇನು ಹಾಗೂ ಈ ಕಾಮಗಾರಿಗಳನ್ನು ಪೂರ್ತಿಗೊಳಿಸಲಾಗುವುದು ಯಾವಾಗ ?

## ರಾಜೀವ್ ಗಾಂಧಿ ವಸತಿ ನಿಗಮದಲ್ಲಿ ಫಲಾನುಭವಿಗಳ ಮನೆ ಲಾಕ್ ಆದ ಬಗ್ಗೆ

**ಶ್ರೀ ಬಸವರಾಜ ಪಾಟೀಲ್ ಇಟಗಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೬೪ (೧೬) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ಮತ್ತು ಕೊಪ್ಪಳ ಜಿಲ್ಲೆಗಳ ಆಶ್ರಯ, ಅಂಬೇಡ್ಕರ್, ಬಸವ ಹಾಗೂ ಇತರ ಯೋಜನೆಗಳಲ್ಲಿ ಮಂಜೂರಾದ ಮನೆಗಳು ರಾಜೀವ್ ಗಾಂಧಿ ವಸತಿ ನಿಗಮದಲ್ಲಿ ಸ್ಥಗಿತಗೊಂಡಿದ್ದು, ಬಡ ಫಲಾನುಭವಿಗಳಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸರ್ಕಾರವು ತೆಗೆದುಕೊಂಡ ಕ್ರಮಗಳೇನು ?

## ರಾಯಚೂರು ಪಟ್ಟಣದಲ್ಲಿ ರಿಂಗ್ ರೋಡ್ ಮಾಡುವ ಬಗ್ಗೆ

**ಶ್ರೀ ಬಸವರಾಜ ಪಾಟೀಲ್ ಇಟಗಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೬೫ (೨೯) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ಪಟ್ಟಣ ಅಧಿಕ ಪ್ರಮಾಣದ ಜನಸಾಂಧ್ರತೆ ಇರುವುದರಿಂದ ರಿಂಗ್ ರೋಡ್ ನಿರ್ಮಾಣ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಆ) ರಾಯಚೂರು ಪಟ್ಟಣದಲ್ಲಿ ಅಧಿಕ ಪ್ರಮಾಣದ ಭಾರಿ ವಾಹನಗಳು ಸಂಚರಿಸುವುದರಿಂದ ಜನರಿಗೆ ಅನಾನುಕೂಲತೆಯಾಗುವುದು ಅಲ್ಲದೇ ಶಾಲಾ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ಕೈಗೊಂಡ ಕ್ರಮವೇನು ;

(ಇ) ರಾಯಚೂರು ಪಟ್ಟಣಕ್ಕೆ ರಿಂಗ್ ರೋಡ್ ನಿರ್ಮಿಸುವ ಪ್ರಸ್ತಾವನೆ ಬಂದಿದ್ದಲ್ಲಿ ಸರ್ಕಾರ ಕೈಗೊಂಡ ಕ್ರಮವೇನು ?

## ದೇವದುರ್ಗ ಪಟ್ಟಣ ಕುಡಿಯುವ ನೀರು ವಿತರಣೆ ಪೈಪುಗಳ ಬಗ್ಗೆ

**ಶ್ರೀ ಬಸವರಾಜ ಪಾಟೀಲ್ ಇಟಗಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೬೬ (೩೦) ಮಾನ್ಯ ಪೌರಾಡಳಿತ ಮತ್ತು ಸ್ಥಳೀಯ ಸಂಸ್ಥೆಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ಜಿಲ್ಲೆ ದೇವದುರ್ಗ ಪಟ್ಟಣದಲ್ಲಿ ೨೪X೭ ಕುಡಿಯುವ ನೀರಿನ ಯೋಜನೆ ಕಾಮಗಾರಿಗಳು ಪೂರ್ಣಗೊಂಡಿವೆಯೇ ;

(ಆ) ಪಟ್ಟಣದಲ್ಲಿ ಮನೆಗಳಿಗೆ ನೀರಿನ ವಿತರಣೆಯ ಪೈಪುಗಳ ಕಾಮಗಾರಿ ಪೂರ್ಣ ಆಗದಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಬಂದಿದ್ದಲ್ಲಿ Pipe line (distribution line) ಕಾಮಗಾರಿ ಕೈಗೊಳ್ಳಲಾಗುವುದು ಯಾವಾಗ ?

## ರಾಯಚೂರು ಜಿಲ್ಲೆಯಲ್ಲಿ ಬರುವ ರಾಜ್ಯ ಹೆದ್ದಾರಿಗಳ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೩೬೭(೪೩೧) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಎಸ್.ಎಚ್–೨೦ ರಾಯಚೂರು ದಿಂದ ಲಿಂಗಸುಗೂರು ವರೆಗೂ ಹಾಗೂ ಎಸ್.ಎಚ್–೨೩ ಶಲ್ಮಲಾ ಕ್ರಾಸ್‌ದಿಂದ ಸಿಂಧನೂರ ವರೆಗೂ ರಸ್ತೆ ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ ಸದರಿ ರಸ್ತೆ ಅಭಿವೃದ್ಧಿಗೊಳಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ಮಾನ್ವಿ ತಾಲ್ಲೂಕು ಮುಸ್ಟೂರು ಗ್ರಾಮದ ಹತ್ತಿರ ಸೇತುವೆ ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ರಾಯಚೂರು ಜಿಲ್ಲೆಯಲ್ಲಿ ಬರುವ ಎಸ್.ಎಚ್–೨೦ ಹಾಗೂ ಎಸ್.ಎಚ್–೨೩ ಇವುಗಳನ್ನು ರಾಷ್ಟ್ರೀಯ ಹೆದ್ದಾರಿಗಳಾಗಿ ಪರಿವರ್ತಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ರಾಯಚೂರು ನಗರಸಭೆಯನ್ನು ಮಹಾನಗರ ಪಾಲಿಕೆಯನ್ನಾಗಿ ಮಾಡುವ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೩೬೮ (೪೩೩) ಮಾನ್ಯ ಪೌರಾಡಳಿತ ಮತ್ತು ಸ್ಥಳೀಯ ಸಂಸ್ಥೆಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ನಗರದಲ್ಲಿ ಕುಡಿಯುವ ನೀರಿಗಾಗಿ ಪ್ರಾರಂಭಿಸಿರುವ ೨೪x೭ ಯೋಜನೆ ಕಾಮಗಾರಿ ಪೂರ್ಣಗೊಳಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ರಾಯಚೂರು ನಗರ ಸಭೆಯನ್ನು ಮಹಾನಗರ ಪಾಲಿಕೆಯನ್ನಾಗಿ ಪರಿವರ್ತಿಸಲು ಸರ್ಕಾರ ತೆಗೆದುಕೊಂಡ ಕ್ರಮವೇನು ;

(ಇ) ಹಾಸನ ನಗರಸಭೆಯನ್ನು ಮಹಾನಗರ ಪಾಲಿಕೆಯನ್ನಾಗಿ ಪರಿವರ್ತಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ರಾಯಚೂರು ಜಿಲ್ಲೆಯಲ್ಲಿ ಅಗ್ನಿಶಾಮಕ ಠಾಣೆ, ಕೇಂದ್ರ ಕಾರಾಗೃಹಗಳ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೩೭೯ (೪೩೪) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ನಗರದ ಹೃದಯ ಭಾಗದಲ್ಲಿರುವ ಕೇಂದ್ರ ಕಾರಾಗೃಹವನ್ನು ನಗರದ ಹೊರಭಾಗಕ್ಕೆ ಸ್ಥಳಾಂತರಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ನೂತನ ತಾಲ್ಲೂಕು ಸಿರವಾರದಲ್ಲಿ ಅಗ್ನಿಶಾಮಕ ಠಾಣೆ ಪ್ರಾರಂಭಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ನೂತನ ತಾಲ್ಲೂಕು ಸಿರವಾರದಲ್ಲಿ ಪೊಲೀಸ್ ಇನ್ಸ್‌ಪೆಕ್ಟರ್‌ರವರ ವೃತ್ತ ಕಛೇರಿ (CPI Circle) ಪ್ರಾರಂಭಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

(ಈ) ರಾಯಚೂರು ಜಿಲ್ಲೆಯಲ್ಲಿ ಪೊಲೀಸ್ ಸಿಬ್ಬಂದಿಗಳ ಕೊರತೆ ನೀಗಿಸಲು ಈ ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

# ರಾಯಚೂರು ಜಿಲ್ಲಾ ನ್ಯಾಯಾಲಯದ ಸಂಕೀರ್ಣ ನಿರ್ಮಾಣದ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೩೭೦ (೪೪೪) ಮಾನ್ಯ ಉಪ ಮುಖ್ಯಮಂತ್ರಿಯವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:–

ರಾಯಚೂರಿನಲ್ಲಿ ಜಿಲ್ಲಾ ನ್ಯಾಯಾಲಯ ಸಂಕೀರ್ಣ ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

# ಬಿ.ಎಂ.ಆರ್.ಸಿ.ಎಲ್ ನೌಕರರ ಬಡ್ತಿ ಕುರಿತು

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರದಿಂದ ಚುನಾಯಿತರಾದವರು):–**

೩೭೧ (೫೯೮) ಮಾನ್ಯ ಉಪ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಮೆಟ್ರೋ ರೈಲು ನಿಗಮ (ಬಿ.ಎಂ.ಆರ್.ಸಿ.ಎಲ್) ದಲ್ಲಿ ಹಾಲಿ ಕೆಲಸ ನಿರ್ವಹಿಸುತ್ತಿರುವ ಖಾಯಂ ಉದ್ಯೋಗಿಗಳು ಎಷ್ಟು ; (ಉದ್ಯೋಗಿಗಳ ಹೆಸರು, ಖಾಯಂ ವಿಳಾಸ, ಹುದ್ದೆಯ ಪದನಾಮ, ಜಾತಿ ಪ್ರವರ್ಗ ಒಳಗೊಂಡಂತೆ ವೃಂದವಾರು ಜ್ಯೇಷ್ಠತಾ ಪಟ್ಟಿಯೊಡನೆ ವಿವರವಾದ ಮಾಹಿತಿ ನೀಡುವುದು)

(ಆ) ಸದರಿ ನೌಕರರ ಮುಂಬಡ್ತಿಗೆ ಜ್ಯೇಷ್ಠತೆಯನ್ನು ಪರಿಗಣಿಸದೆ ಆಂತರಿಕ ಸ್ಪರ್ಧಾತ್ಮಕ ಪರೀಕ್ಷೆ ಇಟ್ಟಿರುವುದು ಸರಿಯೇ ;

(ಇ) ಬಿ.ಎಂ.ಆರ್.ಸಿ.ಎಲ್ ಸಂಸ್ಥೆಯು ನೇಮಕಾತಿಗೆ ಕರ್ನಾಟಕ ಸರ್ಕಾರದ ಮಿಸಲಾತಿ ನಿಯಮಗಳನ್ನು ಮಾತ್ರ ಪಾಲಿಸಿ ಮುಂಬಡ್ತಿಗೆ ನಿಯಮಗಳನ್ನು ಪಾಲಿಸದಿರಲು ಕಾರಣಗಳೇನು ;

(ಈ) ಸರ್ಕಾರ ಹಾಗೂ ಸರ್ಕಾರದ ಇತರೆ ನಿಗಮಗಳು ಮುಂಬಡ್ತಿಗೆ ಜೇಷ್ಠತೆಯನ್ನು ಪಾಲಿಸುವಾಗ ಬಿ.ಎಂ.ಆರ್.ಸಿ.ಎಲ್ ಸಂಸ್ಥೆಯವರು ಪರೀಕ್ಷೆ ಇಟ್ಟು Pick and Choose ಮಾರ್ಗ ಅನುಸರಿಸುತ್ತಿರುವುದು ಎಷ್ಟರ ಮಟ್ಟಿಗೆ ಸರಿ ;

(ಉ) ಈ ತಾರತಮ್ಯವನ್ನು ಸರ್ಕಾರ ಯಾವ ಕಾಲಮಿತಿಯೊಳಗೆ ಬಗೆಹರಿಸಿ ಹಾಲಿ ಇರುವ ನೌಕರರಿಗೆ ಮುಂಬಡ್ತಿ ನೀಡಲಾಗುವುದು?

## ಬೆಂಗಳೂರು ಜಲಮಂಡಳಿ ನೌಕರರ ವೇತನ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರದಿಂದ ಚುನಾಯಿತರಾದವರು):–**

೩೭೨ (೫೯೯) ಮಾನ್ಯ ಉಪ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ (ಬಿ.ಡ.ಬ್ಲ್ಯೂ.ಎಸ್.ಎಸ್.ಬಿ) ಯಲ್ಲಿ ಹಾಲಿ ವೃಂದ ಮತ್ತು ನೇಮಕಾತಿ ನಿಯಮದ ಪ್ರಕಾರ ಜಾರಿಯಲ್ಲಿರುವ ಹುದ್ದೆಗಳು ಯಾವುವು ; (ಹುದ್ದೆವಾರು, ವೇತನ ಶ್ರೇಣಿವಾರು ವಿವರವಾದ ಮಾಹಿತಿ ನೀಡುವುದು)

(ಆ) ಸದರಿ ಮಂಡಳಿಯು ಒಂದು ಉದ್ಯಮವೇ; ಹಾಗಾದಲ್ಲಿ ಇಲ್ಲಿ ಕೆಲಸ ನಿರ್ವಹಿಸುತ್ತಿರುವ ನೌಕರರಿಗೆ ನೀಡುತ್ತಿರುವ ವೇತನ ಶ್ರೇಣಿ ಯಾವುದು; ರಾಜ್ಯ ಸರ್ಕಾರಿ ನೌಕರರಿಗೆ ನೀಡುವ ವೇತನ ಶ್ರೇಣಿಯನ್ನು ಮಂಡಳಿ ನೌಕರರಿಗೆ ನೀಡದಿರಲು ಕಾರಣಗಳೇನು ; (ವಿವರವಾದ ಮಾಹಿತಿ ನೀಡುವುದು)

(ಇ) ಸರ್ಕಾರದ ಇತರೆ ನಿಗಮ ಮಂಡಳಿಗೆ ಹೋಲಿಸಿದಾಗ ಸದರಿ ಮಂಡಳಿಯ ನೌಕರರು ಅತಿ ಹೆಚ್ಚಿನ ವೇತನ ಪಡೆಯುತ್ತಿರಲು ಕಾರಣಗಳೇನು ? (ಸಂಪೂರ್ಣ ವಿವರವಾದ ಮಾಹಿತಿ ನೀಡುವುದು)

## ಕದಲಗೆರೆಯಿಂದ ಕಾಡೇನಹಳ್ಳಿ ಗ್ರಾಮಕ್ಕೆ ಡಾಂಬರೀಕರಣ ಮಾಡುವ ಬಗ್ಗೆ

**ಶ್ರೀ ಅ. ದೇವಗೌಡ (ಪದವೀಧರರ ಕ್ಷೇತ್ರ):–**

೩೭೩ (೪೧೬) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೪–೧೫ನೇ ಸಾಲಿನಲ್ಲಿ ಮಂಡ್ಯ ಜಿಲ್ಲೆ, ಪಾಂಡವಪುರ ತಾಲ್ಲೂಕು ಮೇಲುಕೋಟೆ ಹೋಬಳಿಯ ಕದಲಗೆರೆಯಿಂದ ಕಾಡೇನಹಳ್ಳಿ ಗ್ರಾಮಕ್ಕೆ ರಸ್ತೆ ಡಾಂಬರೀಕರಣಕ್ಕಾಗಿ ಮಂಜೂರಾದ ಹಣವೆಷ್ಟು ;

(ಆ) ಮೇಲ್ಕಂಡ ರಸ್ತೆಯ ಕಾಮಗಾರಿಯ ಕಳಪೆ ಮಟ್ಟದಿಂದ ಕೂಡಿದ್ದು ಸಂಚಾರಕ್ಕೆ ಯೋಗ್ಯವಲ್ಲದ ರೀತಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ರಸ್ತೆ ಡಾಂಬರೀಕರಣವನ್ನು ಯಾವಾಗ ಮಾಡಲಾಗುವುದು ;

(ಇ) ೨೦೧೪–೧೫ನೇ ಸಾಲಿನಲ್ಲಿ ಡಾಂಬರೀಕರಣ ಕಾಮಗಾರಿಯಲ್ಲಿ ಅವ್ಯವಹಾರ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಅವ್ಯವಹಾರ ನಡೆಸಿರುವವರ ವಿರುದ್ಧ ಯಾವ ಕ್ರಮ ಕೈಗೊಂಡಿದೆ ; ? (ಸಂಪೂರ್ಣ ವಿವರ ನೀಡುವುದು)

## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಸೇರಿದ ಆಸ್ತಿಗಳ ಬಗ್ಗೆ

**ಶ್ರೀ ಅ. ದೇವಗೌಡ (ಪದವೀಧರರ ಕ್ಷೇತ್ರ):–**

೩೭೪ (೪೧೭) ಮಾನ್ಯ ಉಪ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಅಡಿ ನಗರ ವ್ಯಾಪ್ತಿಯಲ್ಲಿ ಪಾಲಿಕೆಗೆ ಸೇರಿದ ಆಸ್ತಿಗಳ ಸಂಖ್ಯೆ ಎಷ್ಟು ;

(ಆ) ಸದರಿ ಆಸ್ತಿಗಳ ಪೈಕಿ ಎಷ್ಟು ಆಸ್ತಿಗಳನ್ನು ಲೀಸ್‌ಗೆ ನೀಡಲಾಗಿದೆ ?

## ಗುಡಿಸಲು ಮುಕ್ತ ಮಾಡುವ ಸರ್ಕಾರದ ವಸತಿ ಯೋಜನೆಗಳು ವಾರ್ಷಿಕ ಗುರಿ ತಲುಪಲು ವಿಳಂಬವಾಗುತ್ತಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೩೭೫ (೪೨೬) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯವನ್ನು ಗುಡಿಸಲು ಮುಕ್ತ ಮಾಡುವ ಸರ್ಕಾರದ "ವಸತಿ ಯೋಜನೆಗಳು" ವಾರ್ಷಿಕ ಗುರಿ ತಲುಪಲು ವಿಳಂಬವಾಗುತ್ತಿರುವುದು ನಿಜವೇ ;

(ಆ) ಪ್ರಸಕ್ತ ವರ್ಷದಲ್ಲಿ ಸರ್ಕಾರವು ಹಮ್ಮಿಕೊಂಡಿರುವ ಯೋಜನೆಗಳಾವುವು; ಇವು ಯಾವಾಗ ಜಾರಿಗೆ ಬರುತ್ತವೆ; ೨೦೧೭-೧೮, ೨೦೧೮-೧೯ರಲ್ಲಿ ರಾಜ್ಯ ಸರ್ಕಾರವು ವಿವಿಧ ವಸತಿ ಯೋಜನೆಗಳಡಿಯಲ್ಲಿ ಎಷ್ಟು ಮನೆಗಳನ್ನು ನಿರ್ಮಿಸುವ ಗುರಿ ಹಾಕಿಕೊಂಡಿತ್ತು; ಎಷ್ಟು ಮನೆಗಳನ್ನು ನಿರ್ಮಿಸಿ ಅರ್ಹರಿಗೆ ಹಂಚಿಕೆ ಮಾಡಲಾಗಿದೆ ; ಎಷ್ಟು ಬಾಕಿ ಉಳಿದಿವೆ ; (ವರ್ಷವಾರು ಹಾಗೂ ಯೋಜನೆವಾರು ವಿವರ ನೀಡುವುದು)

(ಇ) ಅದರಲ್ಲಿ ಮನೆಗಳನ್ನು ನಿರ್ಮಿಸಿಕೊಂಡ ಫಲಾನುಭವಿಗಳ ಸಂಖ್ಯೆ ಎಷ್ಟು; ಪ್ರಗತಿಯಲ್ಲಿರುವ ಮನೆಗಳ ಸಂಖ್ಯೆ ಎಷ್ಟು ; ಮನೆಗಳನ್ನು ನಿರ್ಮಿಸಿಕೊಳ್ಳದ ಫಲಾನುಭವಿಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಈ) ೨೦೧೭-೧೮, ೨೦೧೮-೧೯ರಲ್ಲಿ ಬೆಳಗಾವಿ ಜಿಲ್ಲೆಗೆ ದೇವರಾಜ ಅರಸು ವಸತಿ ಯೋಜನೆಯಡಿ ಎಷ್ಟು ಗುರಿ ನಿಗಧಿಪಡಿಸಲಾಗಿತ್ತು; ಇದರಲ್ಲಿ, ಎಷ್ಟು ಫಲಾನುಭವಿಗಳಿಗೆ ಹಂಚಿಕೆ ಮಾಡಲಾಗಿದೆ;

ಎಷ್ಟು ಗುರಿ ಪೂರ್ಣಗೊಂಡಿದೆ; ನಿಗಧಿತ ಗುರಿಯಲ್ಲಿ ಎಷ್ಟು ಬಾಕಿ ಉಳಿದಿವೆ; (ವರ್ಷವಾರು, ತಾಲ್ಲೂಕುವಾರು ವಿವರ ನೀಡುವುದು)

(ಉ) ಸದರಿ ಯೋಜನೆಯಡಿ ವಸತಿ ಸಮಿತಿಯ ಆಯ್ಕೆ ಮಾಡಿದ ವಿಶೇಷ ವರ್ಗದ ಫಲಾನುಭವಿಗಳು (ಅಂಗವಿಕಲರು ಹಾಗೂ ವಿಧವೆಯರು) ಜಿ.ಪಿ.ಎಸ್. ಮಾಡಲು ವಿಳಂಬವಾಗಿ, ಗುರಿ ಪಡೆದಿದ್ದರೂ ಯೋಜನೆಯ ಫಲ ಸಿಗದೆ ಅತಂತ್ರ ಸ್ಥಿತಿಯಲ್ಲಿದ್ದು. ಅತಂತ್ರ ಸ್ಥಿತಿಯಲ್ಲಿದವರಿಗೆ ನ್ಯಾಯ ಒದಗಿಸಲು ಸರ್ಕಾರವು ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ಮಾದಕ ಪದಾರ್ಥಗಳಿಂದ ವಿದ್ಯಾರ್ಥಿಗಳು ಬಲಿಯಾಗುತ್ತಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೭೬ (೪೨೮) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಕ್ಕಳು ಮಾದಕ ಪದಾರ್ಥಗಳಿಗೆ ಅದರಲ್ಲೂ ಶಾಲಾ ಮಕ್ಕಳು ಈ ಮಾದಕ ಪದಾರ್ಥಗಳ ಚಟಕ್ಕೆ ಬೀಳುತ್ತಿರುವ ಮಾಹಿತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಮಾದಕ ಪದಾರ್ಥಗಳ ದುಷ್ಪರಿಣಾಮಗಳ ಬಗ್ಗೆ ಶಾಲಾ ಮಟ್ಟದಲ್ಲಿ ಅರಿವು ಮೂಡಿಸಲು ಸರ್ಕಾರ ಏನಾದರೂ ಕ್ರಮ ಕೈಗೊಂಡಿದೆಯೇ ;

(ಇ) ಮಾದಕ ಪದಾರ್ಥಗಳಿಗೆ ಬಲಿಯಾದ ಮಕ್ಕಳ ಪುನರ್ವಸತಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಶಾಲೆಗಳ ಬಳಿ ಮತ್ತು ಶಾಲೆಗಳಲ್ಲಿ ಮಾದಕ ವಸ್ತುಗಳನ್ನು ಮಾರುವವರು, ವಿತರಿಸುವವರನ್ನು ಬಂಧಿಸಿ ಕ್ರಮ ಕೈಗೊಳ್ಳಲು ಶಿಕ್ಷಣ ಇಲಾಖೆ ಮತ್ತು ಪೊಲೀಸ್ ಇಲಾಖೆ ಜಂಟಿಯಾಗಿ ಏನಾದರೂ ಕ್ರಮ ಕೈಗೊಂಡಿದೆಯೇ ;

(ಉ) ಮಾದಕ ಪದಾರ್ಥಗಳನ್ನು ಮಾರುವ ವ್ಯಕ್ತಿಗಳನ್ನು ಕಂಡು ಹಿಡಿಯಲು/ಶಿಕ್ಷಿಸಲು ಸರ್ಕಾರ ಏನು ಕ್ರಮ ಕೈಗೊಂಡಿದೆ ?

## ಕೊಳಗೇರಿ ಅಭಿವೃದ್ಧಿ ಮಂಡಳಿಯಲ್ಲಿ ಕೇಂದ್ರ ಸರ್ಕಾರದಿಂದ ಬಿಡುಗಡೆಯಾದ ಹಣ ಉಪಯೋಗಿಸದಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೭೭ (೪೨೯) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಧಾನ ಮಂತ್ರಿ ಅವಾಸ್ ಯೋಜನೆಯಡಿ ಮಂಜೂರಾಗಿರುವ ಮನೆಗಳ ಮತ್ತು ಮಂಜೂರಾಗಿರುವ ಅನುದಾನ, ಖರ್ಚು ಮಾಡಲಾದ ಮತ್ತು ಬಾಕಿ ಉಳಿದಿರುವ ಅನುದಾನ ಎಷ್ಟು ; (ವಿವರ ನೀಡುವುದು)

(ಆ) ಮಂಡಳಿಗೆ ೨೦೧೮–೧೯ನೇ ಸಾಲಿನ ಆಯುವ್ಯಯದಲ್ಲಿ ಒದಗಿಸಲಾದ ಅನುದಾನವೆಷ್ಟು; (ಯೋಜನಾವಾರು ಬಿಡುಗಡೆಯಾದ ಮತ್ತು ಖರ್ಚು ಮಾಡಲಾದ ವಿವರ ನೀಡುವುದು)

(ಇ) ೨೦೧೬–೧೭ ರಿಂದ ೨೦೧೮–೧೯ರವರೆಗೆ ಕೊಳಚೆ ಸುಧಾರಣೆ ಯೋಜನೆಯಡಿ ಮಂಜೂರಾಗಿರುವ ಅನುದಾನವೆಷ್ಟು, ಕ್ರಿಯಾ ಯೋಜನೆಯನ್ನು ತಯಾರಿಸಿ ಅನುಮೋದನೆಯಾದ ಕಾಮಗಾರಿಗಳು ಮತ್ತು ಪೂರ್ಣಗೊಂಡ ಕಾಮಗಾರಿಗಳೆಷ್ಟು ;

(ಈ) ೨೦೧೮-೧೯ನೇ ಸಾಲಿನಲ್ಲಿ ಕೊಳಚೆ ಸುಧಾರಣೆ ಯೋಜನೆಯಡಿ ಮಂಜೂರಾಗಿರುವ ಅನುದಾನವೆಷ್ಟು, ಬಿಡುಗಡೆಯಾದ ಅನುದಾನ ಹಾಗೂ ಮಾರ್ಚ್ ಅಂತ್ಯಕ್ಕೆ ಖರ್ಚು ಮಾಡಲಾದ ಅನುದಾನವೆಷ್ಟು; ಬಾಕಿಯಿರುವ ಅನುದಾನ, ಕಾಮಗಾರಿಗಳ ವಿವರ ನೀಡುವುದು ?

## ಬೆಳಗಾವಿ ಮಹಾನಗರ ಪಾಲಿಕೆ ಹಾಗೂ ನಗರ ಸಭೆಯ ಪೌರಕಾರ್ಮಿಕರು ವಸತಿ ಸೌಲಭ್ಯದಿಂದ ವಂಚಿತರಾಗಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೩೭೮ (೪೩೦) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಬಹುತೇಕ ಮಹಾನಗರ ಪಾಲಿಕೆ ಹಾಗೂ ನಗರ ಸಭೆಗಳಲ್ಲಿ ಪೌರ ಕಾರ್ಮಿಕರಿಗೆ ಖಾಯಂ ಮನೆ ನೀಡಿದ್ದರೂ, ಬೆಳಗಾವಿ ಪೌರಕಾರ್ಮಿಕರು ಈ ಸೌಲಭ್ಯದಿಂದ ವಂಚಿತರಾಗಿರುವುದು ನಿಜವೇ ;

(ಆ) ಸುಮಾರು ೫ ಲಕ್ಷಕ್ಕೂ ಅಧಿಕ ಜನಸಂಖ್ಯೆ ಇರುವ ಬೆಳಗಾವಿ ವ್ಯಾಪ್ತಿಯಲ್ಲಿ ಇರುವ ಪೌರಕಾರ್ಮಿಕರ ಸಂಖ್ಯೆ ಎಷ್ಟು ;

(ಇ) ಈ ಪಾಲಿಕೆ ವ್ಯಾಪ್ತಿಯಲ್ಲಿ ಪೌರ ಕಾರ್ಮಿಕರ ವಸತಿಗಾಗಿ ಎಷ್ಟು ವಸತಿ ಗೃಹಗಳಿವೇ; ಈ ವಸತಿ ಗೃಹಗಳಲ್ಲಿ ಎಷ್ಟು ಜನ ಪೌರ ಕಾರ್ಮಿಕರಿಗೆ ಹಂಚಿಕೆ ಮಾಡಲಾಗಿದೆ; ಈ ವಸತಿ ಗೃಹಗಳಲ್ಲಿ ವಾಸಿಸುತ್ತಿರುವ ಪೌರ ಕಾರ್ಮಿಕರ ಸಂಖ್ಯೆ ಎಷ್ಟು ;

(ಈ) ಹಲವಾರು ವಸತಿ ನಿಲಯುಗಳು ಖಾಲಿ ಇರುವುದಾಗಿ ವರದಿಯಾಗಿದ್ದು, ಇದಕ್ಕೆ ಕಾರಣಗಳೇನು ;

(ಉ) ಹಲವು ವಸತಿ ಗೃಹಗಳು ಜೀರ್ಣಾವಸ್ಥೆಯಲ್ಲಿರುವುದರಿಂದ ಅವುಗಳನ್ನು ತೆರವುಗೊಳಿಸಿ ಹೊಸ ವಸತಿ ಗೃಹಗಳ ನಿರ್ಮಾಣ ಮಾಡುವ ಯೋಜನೆ ಸರ್ಕಾರಕ್ಕಿದೆಯೇ; ? ಇದ್ದಲ್ಲಿ ಅದರ ಬಗ್ಗೆ ವಿವರವಾದ ಮಾಹಿತಿ ನೀಡುವುದು ;

## ವಸತಿ ಯೋಜನೆ ಕುರತು

**ಶ್ರೀ ಕೆ.ಸಿ. ಕೊಂಡಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೭೯ (೪೪೨) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಳ್ಳಾರಿ ಜಿಲ್ಲೆಯಾದ್ಯಂತ ೨೦೧೭–೧೮, ೨೦೧೮–೧೯ನೇ ಸಾಲಿನಲ್ಲಿ ಬಸವ ವಸತಿ ಯೋಜನೆ/ವಾಜಪೇಯಿನಗರ ವಸತಿ ಯೋಜನೆಯಡಿ ಹಾಗೂ ಇನ್ನಿತರ ಸರ್ಕಾರಿ ವಸತಿ ಯೋಜನೆಯಡಿ ಎಷ್ಟು ಮನೆಗಳನ್ನು ಹಂಚಿಕೆ ಮಾಡಲಾಗಿದೆ ;

(ಆ) ಈ ಯೋಜನೆಗಳ ಉಪಯೋಗವನ್ನು ಎಷ್ಟು ವಸತಿ ಹೀನರು ಪಡೆದುಕೊಂಡಿದ್ದಾರೆ ; (ವಿವರ ನೀಡುವುದು)

(ಇ) ಬಳ್ಳಾರಿ ಜಿಲ್ಲೆಯ ಹೂವಿನಹಡಗಲ ತಾಲ್ಲೂಕು ಗದ್ದಿಕೇರಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಹೆಚ್ಚು ವಸತಿ ಹೀನರಿದ್ದು ಹೆಚ್ಚುವರಿಯಾಗಿ ೧೦೦ ಮನೆಗಳನ್ನು ೨೦೧೭–೧೮ ನೇ ಸಾಲಿನಲ್ಲಿ ಹಂಚಿಕೆ ಮಾಡಲು ಹಿಂದಿನ ಇಬ್ಬರು ಸಚಿವರು ಸೂಚಿಸಿದ್ದರೂ ಇದುವರೆವಿಗೂ ಕಾರ್ಯಗತವಾಗಿಲ್ಲವೇಕೆ; ಈ ಕಾರ್ಯ ಯಾವ ಹಂತದಲ್ಲಿದೆ ?

## ಬೆಂಗಳೂರು ನಗರದಲ್ಲಿ ಮಳೆಯಿಂದ ಮರಗಳು ನೆಲಕ್ಕೆ ಉರುಳುತ್ತಿರುವ ಬಗ್ಗೆ

**ಶ್ರೀ ಲಹರ್ ಸಿಂಗ್ ಸಿರೋಯಾ (ವಿಧಾನಸಭೆಯಿಂದ ಚುನಾಯಿತರಾದವರು):–**

೩೮೦ (೨೧೩) ಮಾನ್ಯ ಉಪ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರದಲ್ಲಿ ಕಳೆದ ಒಂದು ವರ್ಷದಲ್ಲಿ ೬೦೦ ಕ್ಕೂ ಹೆಚ್ಚು ಮರಗಳು ಮಳೆಯಿಂದಾಗಿ ನೆಲಕ್ಕುರುಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬೆಂಗಳೂರು ನಗರದಲ್ಲಿ ಮರಗಳನ್ನು ಉಳಿಸಲು, ಬೆಳೆಸಲು, 'ಹಸಿರು ನಗರ' ಎಂಬ ಖ್ಯಾತಿಯನ್ನು ಸಂರಕ್ಷಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಇ) ಮಳೆಗಾಲದಲ್ಲಿ ಮರಗಳು ಬೀಳುವುದರಿಂದ ಉಂಟಾಗುತ್ತಿರುವ ಪ್ರಾಣ ಹಾನಿ, ನಷ್ಟ, ವಿದ್ಯುತ್ ಸಮಸ್ಯೆ ಮುಂತಾದ ಅನಾಹುತಗಳನ್ನು ತಪ್ಪಿಸಲು ಸರ್ಕಾರ ಏನು ಕ್ರಮ ತೆಗೆದುಕೊಂಡಿದೆ ?

## ಹಜ್ ಭವನಗಳ ಕಾಮಗಾರಿ ಕುರಿತು

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು):–**

೩೮೧ (೦೧) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳು, ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಎರಡು ವರ್ಷಗಳಲ್ಲಿ ವಿಜಯಪುರ ಜಿಲ್ಲೆ ಮತ್ತು ತಾಲ್ಲೂಕು ಕೇಂದ್ರಗಳಲ್ಲಿ ಅಲ್ಪಸಂಖ್ಯಾತರಿಗೋಸ್ಕರ ಮಂಜೂರಾಗಿರುವ ಹಜ್ ಭವನಗಳ ಸಂಖ್ಯೆ ಎಷ್ಟು ; (ವಿವರ ಒದಗಿಸುವುದು)

(ಆ) ಇವುಗಳಲ್ಲಿ ಎಷ್ಟು ಹಜ್ ಭವನಗಳ ಕಾಮಗಾರಿಗಳನ್ನು ಪೂರ್ಣಗೊಳಿಸಲಾಗಿದೆ ; (ವಿವರ ಒದಗಿಸುವುದು)

(ಇ) ಕಾಮಗಾರಿ ಪೂರ್ಣಗೊಳ್ಳದೆ ಇರುವ ಹಜ್ ಭವನಗಳ ಸಂಖ್ಯೆ ಎಷ್ಟು ? (ವಿವರ ಒದಗಿಸುವುದು)

## ರಾಜೀವ್ ಗಾಂಧಿ ವಸತಿ ನಿಗಮದಿಂದ ಮನೆಗಳ ಹಂಚಿಕೆ ಕುರಿತು

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು):–**

೩೮೨ (೦೨) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಿಂದ ಇಲ್ಲಿಯವರೆವಿಗೆ ವಿಜಯಪುರ ಜಿಲ್ಲೆಯಾದ್ಯಂತ ರಾಜೀವ್ ಗಾಂಧಿ ವಸತಿ ನಿಗಮ ಮತ್ತು ಬಸವ ವಸತಿ ಯೋಜನೆ ಅಡಿಯಲ್ಲಿ ಆಯ್ಕೆಯಾಗಿರುವ ಫಲಾನುಭವಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ಒದಗಿಸುವುದು)

(ಆ) ಆಯ್ಕೆಯಾಗಿರುವ ಫಲಾನುಭವಿಗಳಿಗೆ ಎಷ್ಟು ಆಶ್ರಯ ಮನೆಗಳನ್ನು ನೀಡಲಾಗಿದೆ ; ಮತ್ತು ಆಯ್ಕೆಯಾಗಿದ್ದರೂ ಯಾವ ಕಾರಣಕ್ಕಾಗಿ ಫಲಾನುಭವಿಗಳಿಗೆ ಆಶ್ರಯ ಮನೆಗಳನ್ನು ಇದುವರೆವಿಗೂ ವಿತರಿಸಿರುವುದಿಲ್ಲ ; (ವಿವರ ನೀಡುವುದು)

(ಇ) ವಿತರಿಸದೆ ಇರುವ ಫಲಾನುಭವಿಗಳಿಗೆ ಎಷ್ಟು ಕಾಲಾವಧಿಯಲ್ಲಿ ಆಶ್ರಯ ಮನೆಗಳನ್ನು ವಿತರಿಸಲಾಗುವುದು ? (ವಿವರ ಒದಗಿಸುವುದು)

## ಮೂಲಭೂತ ಸೌಕರ್ಯಗಳ ಅನುಷ್ಠಾನದ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು):–**

೩೮೩ (೦೩) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಎರಡು ವರ್ಷಗಳಿಂದ ಇಲ್ಲಿಯವರೆವಿಗೆ ವಿಜಯಪುರ ಮಹಾನಗರ ಪಾಲಿಕೆಗೆ ಮೂಲಭೂತ ಸೌಕರ್ಯಗಳನ್ನು ಅನುಷ್ಠಾನಗೊಳಿಸುವ ಸಂಬಂಧ ಬಿಡುಗಡೆಯಾಗಿರುವ ಅನುದಾನದ ಮೊತ್ತದ ವಿವರವನ್ನು ಶೀರ್ಷಿಕೆವಾರು ಒದಗಿಸುವುದು ;

(ಆ) ಹಾಗಿದ್ದಲ್ಲಿ, ಬಿಡುಗಡೆಯಾಗಿರುವ ಅನುದಾನದಲ್ಲಿ ಎಷ್ಟು ಅನುದಾನದ ಮೊತ್ತವನ್ನು ಮೂಲಭೂತ ಸೌಕರ್ಯಗಳ ಅನುಷ್ಠಾನಕ್ಕಾಗಿ ಬಳಸಿಕೊಳ್ಳಲಾಗಿದೆ ; (ವಿವರ ಒದಗಿಸುವುದು)

(ಇ) ಬಿಡುಗಡೆಯಾಗಿರುವ ಅನುದಾನದಲ್ಲಿ ಬಳಸದೆ ಉಳಿದಿರುವ ಅನುದಾನದ ಮೊತ್ತದ ವಿವರ ಒದಗಿಸುವುದು ?

## ಮಂಜೂರಾಗಿರುವ ನ್ಯಾಯಬೆಲೆ ಅಂಗಡಿಗಳ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು):–**

೩೮೪ (೦೪) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳು, ಅಲ್ಪ ಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಎರಡು ವರ್ಷಗಳಿಂದ ಇಲ್ಲಿಯವರೆಗೆ ವಿಜಯಪುರ ಜಿಲ್ಲಾ ಕೇಂದ್ರ ತಾಲ್ಲೂಕು ಕೇಂದ್ರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ

ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ವತಿಯಿಂದ ನೂತನವಾಗಿ ಮಂಜೂರಾಗಿರುವ ನ್ಯಾಯಬೆಲೆ ಅಂಗಡಿಗಳ ಸಂಖ್ಯೆ ಎಷ್ಟು ; (ವಿವರ ಒದಗಿಸುವುದು)

(ಆ) ಇವುಗಳಲ್ಲಿ ಕಾರ್ಯಾರಂಭ ಮಾಡಿರುವ ಹಾಗೂ ಮಾಡದಿರುವ ನ್ಯಾಯಬೆಲೆ ಅಂಗಡಿಗಳ ಸಂಖ್ಯೆ ಎಷ್ಟು ? (ವಿವರ ಒದಗಿಸುವುದು)

## ಆಕಸ್ಮಿಕ ರಜೆಯ ಸೌಲಭ್ಯಗಳ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು):–**

೩೮೫ (೪೪೯) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರಸ್ತುತ ರಾಜ್ಯ ಸರ್ಕಾರವು ಪ್ರತಿ ೪ನೇ ಶನಿವಾರವನ್ನು ರಜಾ ದಿನವೆಂದು ಘೋಷಣೆ ಮಾಡಿ, ಸಾಂದರ್ಭಿಕ ರಜೆಯನ್ನು ೧೫ ದಿನಗಳಿಂದ ೧೦ ದಿನಗಳಿಗೆ ನಿಗದಿಗೊಳಿಸಿದೆಯೇ ;

(ಆ) ಈ ರಜಾ ದಿನ ಪೊಲೀಸ್ ಇಲಾಖೆ/ಅಗ್ನಿಶಾಮಕ ಸಿಬ್ಬಂದಿ/ ಹೋಂ ಗಾರ್ಡ್ ಸಿಬ್ಬಂದಿಗಳಿಗೆ ಅನ್ವಯಿಸುವುದೇ ಹಾಗೂ ಸಾಂದರ್ಭಿಕ ರಜೆಯನ್ನು ೧೫ ದಿನಗಳಿಂದ ೧೦ ದಿನಗಳಿಗೆ ನಿಗದಿಗೊಳಿಸಲಾಗಿದೆಯೇ ? (ಸಂಪೂರ್ಣ ವಿವರ ನೀಡುವುದು)

## ಅಕ್ರಮ ಬಾಂಗ್ಲಾ ವಲಸಿಗರ ಬಗ್ಗೆ

**ಶ್ರೀ ಎಂ.ಕೆ. ಪ್ರಾಣೇಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೮೬ (೪೨೫) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಾಫಿ ನಾಡು ಚಿಕ್ಕಮಗಳೂರು, ಕೊಡಗು, ಹಾಸನ ಜಿಲ್ಲೆಗಳಲ್ಲಿ ಅಕ್ರಮ ಬಾಂಗ್ಲಾ ವಲಸಿಗರು ವಾಸಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಇಲ್ಲಿಯ ಕಾಫಿ ತೋಟಗಳಲ್ಲಿ ಎಷ್ಟು ಜನ ಅಕ್ರಮ ಬಾಂಗ್ಲಾ ವಲಸಿಗರು ವಾಸಿಸುತ್ತಿದ್ದಾರೆ ;

(ಇ) ಈ ಜಿಲ್ಲೆಗಳಲ್ಲಿ ಅಕ್ರಮ ಬಾಂಗ್ಲಾ ವಲಸಿಗರನ್ನು ಗಡಿಪಾರು ಮಾಡುವ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಈ) ಅಕ್ರಮ ಬಾಂಗ್ಲಾ ವಲಸಿಗರು ಅಪರಾಧ ಚಟುವಟಿಕೆಗಳಲ್ಲಿ ಭಾಗಿಯಾಗಿದ್ದಾರೆಯೇ ; ಅವರ ಬಗ್ಗೆ ಯಾವ ಕ್ರಮ ಕೈಗೊಳ್ಳಲಾಗಿದೆ ? (ವಿವರ ನೀಡುವುದು)

## ಶಿವಮೊಗ್ಗ ನಗರದಲ್ಲಿ ಪ್ರತಿದಿನ ಎಷ್ಟು ಟನ್ ಕಸ ವಿಲೇವಾರಿ

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೮೭ (೪೫೦) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಿವಮೊಗ್ಗ ನಗರದಲ್ಲಿ ಪ್ರತಿದಿನ ಎಷ್ಟು ಟನ್ ಕಸ ವಿಲೇವಾರಿ ಮಾಡಲಾಗುತ್ತಿದೆ ; ಗುತ್ತಿಗೆದಾರರಿಗೆ ಕಸ ವಿಲೇವಾರಿಗಾಗಿ ದಿನವೊಂದಕ್ಕೆ ಪಾವತಿಸುತ್ತಿರುವ ಹಣವೆಷ್ಟು ; ಇವರಿಗೆ ಪಾವತಿಸಿದ ಒಟ್ಟು ಹಣವೆಷ್ಟು ; (ವಿವರ ನೀಡುವುದು)

(ಆ) ನಗರದ ಪ್ರತಿ ಕುಟುಂಬದಿಂದ ಕಸದ ಸೆಸ್ ಆಗಿ ಹಣ ವಸೂಲು ಮಾಡಲಾಗುತ್ತಿದೆಯೇ ; ಒಟ್ಟು ಆದಾಯ ಮತ್ತು ಖರ್ಚು ಎಷ್ಟು ;

(ಇ) ನಗರದಲ್ಲಿ ಕುಡಿಯುವ ನೀರಿಗೆ ವರ್ಷವೊಂದಕ್ಕೆ ತಗಲುವ ವೆಚ್ಚವೆಷ್ಟು ; ನೀರು ಬಳಕೆದಾರರಿಂದ ಬರುತ್ತಿರುವ ಆದಾಯವೆಷ್ಟು ; (ವಿವರ ನೀಡುವುದು)

(ಈ) ನಗರದಲ್ಲಿ ಎಷ್ಟು ಮನೆಗಳಿವೆ ; ಅನಧಿಕೃತವಾಗಿ ನೀರು ಸರಬರಾಜು ಆಗುತ್ತಿರುವುದನ್ನು ಪತ್ತೆ ಹಚ್ಚಲಾಗಿದೆಯೇ ; ಇದನ್ನು ತಡೆಯಲು ಇಲಾಖೆ ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಉ) ನಗರದಲ್ಲಿ ಒಟ್ಟು ಎಷ್ಟು ಅನಧಿಕೃತ ಕಟ್ಟಡಗಳಿವೆ ; ಮನೆ ಸಂಖ್ಯೆ ನೀಡದಿರುವ ಕಟ್ಟಡಗಳ ಮೇಲೆ ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ಶಿವಮೊಗ್ಗ ಜಿಲ್ಲೆಯ ಸ್ಥಳೀಯ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪೌರಕಾರ್ಮಿಕರ ಬಗ್ಗೆ

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೮೮ (೪೫೧) ಮಾನ್ಯ ಪೌರಾಡಳಿತ ಮತ್ತು ಸ್ಥಳೀಯ ಸಂಸ್ಥೆಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಶಿವಮೊಗ್ಗ ಜಿಲ್ಲೆಯ ಸ್ಥಳೀಯ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಪೌರ ಕಾರ್ಮಿಕರ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ಇದುವರೆಗೆ ಎಷ್ಟು ಪೌರ ಕಾರ್ಮಿಕರನ್ನು ಖಾಯಂಗೊಳಿಸಲಾಗಿದೆ ; ಎಷ್ಟು ಪೌರ ಕಾರ್ಮಿಕರನ್ನು ಖಾಯಂಗೊಳಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆ ;

(ಇ) ಪೌರ ಕಾರ್ಮಿಕರಿಗೆ ಪ್ರಸ್ತುತ ನೀಡಲಾಗುತ್ತಿರುವ ವೇತನ ಮತ್ತು ಇತರೆ ಸವಲತ್ತುಗಳೇನು ;

(ಈ) ಎಷ್ಟು ಪೌರ ಕಾರ್ಮಿಕರನ್ನು ವಿದೇಶ ಅಧ್ಯಯನ ಪ್ರವಾಸಕ್ಕೆ ಕಳುಹಿಸಲಾಗಿದೆ ; ಇನ್ನು ಎಷ್ಟು ಮಂದಿಯನ್ನು ಪ್ರವಾಸಕ್ಕೆ

ಕಳುಹಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆ ; ವಿದೇಶ ಪ್ರವಾಸ ಮಾಡಿರುವ ಪೌರ ಕಾರ್ಮಿಕರ ಗುಣಮಟ್ಟ ಹೆಚ್ಚಿದೆಯೇ ;

(ಉ) ಪೌರ ಕಾರ್ಮಿಕರನ್ನು ಖಾಯಂಗೊಳಿಸುವಂತೆ ಅನೇಕ ವರ್ಷಗಳಿಂದ ಪೌರಾಡಳಿತ ಸಂಸ್ಥೆಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಗ್ರೂಪ್–ಡಿ ಮತ್ತಿತರ ನೌಕರರನ್ನು ಖಾಯಂಗೊಳಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ತಾತ್ಕಾಲಿಕ ನೌಕರರನ್ನು ಖಾಯಂಗೊಳಿಸಿ ಜೀವನ ಭದ್ರತೆ ಒದಗಿಸುವ ಬಗ್ಗೆ ಸರ್ಕಾರದ ನಿಲುವೇನು ; ಈ ಕುರಿತು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ?

## ಶಿವಮೊಗ್ಗ ನಗರದಲ್ಲಿ ಪೊಲೀಸರು ರಸ್ತೆಯಲ್ಲಿ ವಾಹನಗಳನ್ನು ತಡೆದು ತಪಾಸಣೆ ನಡೆಸುತ್ತಿರುವ ಬಗ್ಗೆ

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೮೯ (೪೫೨) ಮಾನ್ಯ ಗೃಹ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ಶಿವಮೊಗ್ಗ ನಗರದಲ್ಲಿ ಪೊಲೀಸರು ರಸ್ತೆಯಲ್ಲಿ ವಾಹನಗಳನ್ನು ತಡೆದು ದಾಖಲೆಗಳ ತಪಾಸಣೆ ಮಾಡಬಾರದೆಂದು, ಸಂಚಾರ ನಿಯಮ ಉಲ್ಲಂಘನೆ ಮಾಡಿದ ಸಮಯದಲ್ಲಿ ಮಾತ್ರ ತಪಾಸಣೆ ಮಾಡಬೇಕೆಂದು ಪೊಲೀಸ್ ಆಯುಕ್ತರು ಸುತ್ತೋಲೆ ಹೊರಡಿಸಿದ್ದರೂ (ಸುತ್ತೋಲೆಯ ಪ್ರತಿಯನ್ನು ಒದಗಿಸುವುದು) ಪೊಲೀಸರು ವಾಹನಗಳನ್ನು ನಿಲ್ಲಿಸಿ ದಾಖಲೆಗಳ ತಪಾಸಣೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಎಷ್ಟು ಪೊಲೀಸ್ ಅಧಿಕಾರಿಗಳ ಮೇಲೆ ಕ್ರಮ ಕೈಗೊಳ್ಳಲಾಗಿದೆ ?

## ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಕೊಳಚೆ ನಿರ್ಮೂಲನೆ ಮಂಡಳಿಗೆ ಬಿಡುಗಡೆ ಮಾಡುವ ಹಣದ ಬಗ್ಗೆ

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೯೦ (೪೫೪) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಕೊಳಚೆ ನಿರ್ಮೂಲನೆ ಮಂಡಳಿಗೆ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ ; ಬಿಡುಗಡೆ ಮಾಡಿದ ಹಣದಲ್ಲಿ ಶಿವಮೊಗ್ಗ ಜಿಲ್ಲೆಯ ಯಾವ ಯಾವ ಅಭಿವೃದ್ಧಿ ಕಾಮಗಾರಿಗಳಿಗೆ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ ; ಅದರಲ್ಲಿ ಈಗ ಖರ್ಚು ಮಾಡಿರುವ ಹಾಗೂ ಖರ್ಚು ಮಾಡದೆ ಬಾಕಿ ಉಳಿದಿರುವ ಮೊತ್ತವೆಷ್ಟು ; (ಕಾಮಗಾರಿವಾರು, ವರ್ಗವಾರು ವಿವರವಾದ ಸಂಪೂರ್ಣ ಮಾಹಿತಿ ನೀಡುವುದು)

(ಆ) ಕೊಳಚೆ ನಿರ್ಮೂಲನ ಮಂಡಳಿಗೆ ಸರ್ಕಾರದಿಂದ ಪ್ರತಿ ವರ್ಷ ಮಂಜೂರಾಗುವ ಮೊತ್ತವೆಷ್ಟು ; ಸದರಿ ಹಣವನ್ನು ಯಾವ ಯಾವ ಕಾಮಗಾರಿಗಳ ಅನುಷ್ಠಾನಕ್ಕಾಗಿ ಬಿಡುಗಡೆ ಮಾಡಲಾಗುವುದು ? (ಸಂಪೂರ್ಣವಾದ, ವಿವರವಾದ ಮಾಹಿತಿ ನೀಡುವುದು)

## ಪೊಲೀಸ್ ಅಧಿಕಾರಿಗಳು ಸಂಚಾರಿ ನಿಯಮ ಉಲ್ಲಂಘನೆ ಪ್ರಕರಣದಲ್ಲಿ ದಂಡ ವಿಧಿಸುವ ಬಗ್ಗೆ

**ಶ್ರೀ ಹೆಚ್.ಎಂ. ರೇವಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೯೧ (೨೮೯) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೦೮–೨೦೦೯ನೇ ಸಾಲಿನಿಂದ ೨೦೧೮–೧೯ವರೆಗೆ ವರ್ಷವಾರು (ಪ್ರತ್ಯೇಕವಾಗಿ) ಬೆಂಗಳೂರು ನಗರದಲ್ಲಿ ಪೊಲೀಸ್ ಅಧಿಕಾರಿಗಳು ಸಂಚಾರಿ ನಿಯಮ ಉಲ್ಲಂಘನೆ ಪ್ರಕರಣಗಳಲ್ಲಿ

ಸ್ಥಳ ದಂಡ ವಿಧಿಸಿದ ಒಟ್ಟು ಪ್ರಕರಣಗಳ ಸಂಖ್ಯೆ ಎಷ್ಟು ; ಹಾಗೂ ಸಂಗ್ರಹವಾದ ಒಟ್ಟು ದಂಡವೆಷ್ಟು ;

(ಆ) ಪ್ರತಿದಿವಸದ ಸ್ಥಳ ದಂಡ ಸಂಗ್ರಹವಾದ ಒಟ್ಟು ದಂಡ ಹಣವೆಷ್ಟು ; (ವರ್ಷವಾರು ಮಾಹಿತಿ ನೀಡುವುದು)

(ಇ) ಸಂಗ್ರಹವಾದ ಹಣವನ್ನು ನಿಗದಿತ ಸಮಯದಲ್ಲಿ ಸರ್ಕಾರಕ್ಕೆ ಜಮಾ ಮಾಡದೆ ಎಷ್ಟು ದಿನ ತಿಂಗಳು ವರ್ಷ ವಿಳಂಬವಾಗಿ ಸರ್ಕಾರದ ಖಜಾನೆಗೆ ಜಮಾ ಮಾಡಲಾಗಿದೆ ; (ಠಾಣಾವಾರು ಚಲನ್‌ಗಳ ನಂಬರ್ ದಿನಾಂಕದ ವಿವರಗಳನ್ನು ನೀಡುವುದು)

(ಈ) ಸ್ಥಳ ದಂಡದ ಹಣವನ್ನು ನಿಗದಿತ ಸಮಯಕ್ಕೆ ಪೂರ್ಣ ಹಣವನ್ನು ಜಮಾ ಮಾಡದೆ ಇರಲು ಕಾರಣವೇನು ; ವಿಳಂಬವಾಗಲು ಕಾರಣವೇನು ; ಇದರ ಬಗ್ಗೆ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮಕೈಗೊಳ್ಳಲಾಗಿದೆಯೇ ;

(ಉ) ಈ ಬಗ್ಗೆ ಆಂತರಿಕ ಲೆಕ್ಕ ಪರಿಶೋಧನೆಯಲ್ಲಿ ಬೆಳಕಿಗೆ ಬಂದ ಒಟ್ಟು ಪ್ರಕರಣಗಳೆಷ್ಟು ? (ವರ್ಷವಾರು ಠಾಣಾವಾರು ಪ್ರಕರಣದ ವಿವರಗಳನ್ನು ನೀಡುವುದು)

## ಬೆಂಗಳೂರು ನಗರ ಪಶ್ಚಿಮ ಕಾರ್ಡ್ ರಸ್ತೆಯಲ್ಲಿ ಫ್ಲೈ ಓವರ್ ನಿರ್ಮಾಣ ಮಾಡುತ್ತಿರುವ ಬಗ್ಗೆ

**ಶ್ರೀ ಹೆಚ್.ಎಂ. ರೇವಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೭ (೨೧೦) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರದ ಪಶ್ಚಿಮ ಕಾರ್ಡ್ ರಸ್ತೆಯಲ್ಲಿ ಸಿಗ್ನಲ್ ಮುಕ್ತ ರಸ್ತೆಗಾಗಿ ಫ್ಲೈ ಓವರ್ ಕಾಮಗಾರಿಯು ಪ್ರಾರಂಭವಾಗಿ ಕಾಮಗಾರಿ ಪೂರ್ಣಗೊಳ್ಳದೆ ಅರ್ಧಕ್ಕೆ ನಿಂತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕಾಮಗಾರಿಗೆ ತಗಲುವ ಅಂದಾಜು ವೆಚ್ಚವೆಷ್ಟು ; ಹಾಗೂ ಕಾಲಾವಧಿ ಎಷ್ಟು ;

(ಇ) ಸಾರ್ವಜನಿಕರ ಹಿತದೃಷ್ಟಿಯಿಂದ ಕಾಮಗಾರಿಯನ್ನು ಶೀಘ್ರವಾಗಿ ಪೂರ್ಣಗೊಳಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ವಸತಿ ಇಲಾಖೆಯಲ್ಲಿ ವಿವಿಧ ಯೋಜನೆಯಡಿಯಲ್ಲಿ ನೀಡುವ ಮನೆಗಳ ಬಗ್ಗೆ

**ಶ್ರೀ ಹೆಚ್.ಎಂ. ರೇವಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೯೩ (೨೧೧) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೮–೧೯ನೇ ಸಾಲಿನಲ್ಲಿ ಯಾವ ಯಾವ ಯೋಜನೆಯಿಂದ ಎಷ್ಟು ಮನೆಗಳನ್ನು ನಿರ್ಮಿಸಲಾಗಿದೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಫಲಾನುಭವಿಗಳನ್ನು ಆಯ್ಕೆ ಮಾಡಲು ಅನುಸರಿಸುವ ಮಾನದಂಡಗಳೇನು ? (ಪೂರ್ಣ ಮಾಹಿತಿಯುನ್ನು ಒದಗಿಸುವುದು)

## ಬೀದರ್ ನಗರ ಸಭೆ ವ್ಯಾಪ್ತಿಯ ಒಳಚರಂಡಿ ಕಾಮಗಾರಿಗಳ ಬಗ್ಗೆ

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೩೯೪ (೫೭೬) ಮಾನ್ಯ ಪೌರಾಡಳಿತ ಮತ್ತು ಸ್ಥಳೀಯ ಸಂಸ್ಥೆಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಿಂದ ಬೀದರ್ ನಗರ ಸಭೆಯ ಅಭಿವೃದ್ಧಿಗಾಗಿ ಸರ್ಕಾರ ಬಿಡುಗಡೆ ಮಾಡಿದ ಮೊತ್ತವೆಷ್ಟು ; ಯಾವ ಯಾವ ಕಾಮಗಾರಿಗಳಿಗಾಗಿ ಬಿಡುಗಡೆ ಮಾಡಲಾಗಿದೆ ;

(ಆ) ಬೀದರ್ ನಗರ ಸಭೆಯ ವ್ಯಾಪ್ತಿಯಲ್ಲಿ ಒಳಚರಂಡಿ ಕಾಮಗಾರಿ ಪೂರ್ಣಗೊಳ್ಳದೇ ಇರುವುದಕ್ಕೆ ಅನುದಾನದ ಕೊರೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಬಾಕಿ ಕಾಮಗಾರಿಗಳಿಗೆ ಮಂಜೂರಾತಿಯನ್ನು ಮತ್ತು ಹಣವನ್ನು ಎಷ್ಟು ದಿನಗಳಲ್ಲಿ ಬಿಡುಗಡೆ ಮಾಡಲಾಗುವುದು ;

(ಈ) ಒಳಚರಂಡಿ ಕಾಮಗಾರಿಯಿಂದ ನಗರದ ರಸ್ತೆಗಳು ಹಾಳಾಗಿದ್ದು, ದುರಸ್ಥಿ ಮಾಡಲು ಬೇಕಾಗುವ ಮೊತ್ತವೆಷ್ಟು ; ಈ ಕಾಮಗಾರಿಗಳನ್ನು ಮಂಜೂರು ಮಾಡಲು ಸರ್ಕಾರಕ್ಕೆ ಇರುವ ತೊಂದರೆ ಏನು ;

(ಉ) ಈ ಎಲ್ಲಾ ಕಾಮಗಾರಿಗಳನ್ನು ಎಷ್ಟು ದಿನಗಳಲ್ಲಿ ಪೂರ್ಣಗೊಳಿಸಲಾಗುವುದು ? (ವಿವರ ನೀಡುವುದು)

## ಬೀದರ್ ಜಿಲ್ಲೆಯ ವಸತಿ ಯೋಜನೆ ಬಗ್ಗೆ

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೩೯೫ (೫೭೭) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಎರಡು ವರ್ಷಗಳಿಂದ ಬೀದರ್ ಜಿಲ್ಲೆಗೆ ವಿವಿಧ ವಸತಿ ಯೋಜನೆಗಳಡಿ ವಸತಿ ರಹಿತ ಫಲಾನುಭವಿಗಳಿಗೆ ಎಷ್ಟು ಮನೆಗಳು ಮಂಜೂರಾಗಿವೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಪ್ರಸ್ತುತ ಸಾಲಿಗೆ ವಸತಿ ಸೌಲಭ್ಯ ಕಲ್ಪಿಸಲು ನಿಗಧಿಪಡಿಸಿದ ಗುರಿ ಎಷ್ಟು ;

(ಇ) ನಿವೇಶನ ರಹಿತ ಫಲಾನುಭವಿಗಳಿಗೆ ನಿವೇಶನ ವಿತರಿಸಲು ಜಮೀನು ಖರೀದಿ ಪ್ರಸ್ತಾವನೆಗಳು ಸರ್ಕಾರದ ಮುಂದಿದೆಯೇ ;

(ಈ) ಹಾಗಿದ್ದಲ್ಲಿ, ಅವುಗಳ ಸಂಖ್ಯೆಯಷ್ಟು ; ಜಮೀನು ಖರೀದಿಗೆ ಅನುದಾನ ಮಂಜೂರು ಮಾಡಿದ ಹಾಗೂ ಬಾಕಿ ಉಳಿದ ಪ್ರಸ್ತಾವನೆಗಳು ಎಷ್ಟು ; (ಗ್ರಾಮವಾರು ವಿವರ ನೀಡುವುದು)

(ಉ) ಬಾಕಿ ಉಳಿದ ಪ್ರಸ್ತಾವನೆಗಳಿಗೆ ಅನುದಾನ ಮಂಜೂರು ಮಾಡಲು ವಿಳಂಬ ಆಗಿರುವುದಕ್ಕೆ ಕಾರಣಗಳೇನು ? (ವಿವರ ನೀಡುವುದು)

## ಚರಂಡಿ ಸ್ವಚ್ಛಗೊಳಿಸಲು ಕೈಗೊಂಡ ಕ್ರಮಗಳ ಬಗ್ಗೆ

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೩೯೭ (೫೭೮) ಮಾನ್ಯ ಪೌರಾಡಳಿತ ಮತ್ತು ಸ್ಥಳೀಯ ಸಂಸ್ಥೆಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೭ ನೇ ಸಾಲಿನಲ್ಲಿ ಬೀದರ್ ನಗರದಲ್ಲಿ ಮಳೆಗಾಲದ ಪೂರ್ವ ಸಿದ್ದತೆಗಾಗಿ ಚರಂಡಿ ಸ್ವಚ್ಛಗೊಳಿಸಲು ಕೈಗೊಂಡ ಕಾಮಗಾರಿಗಳಲ್ಲಿ ಆದ ಅವ್ಯವಹಾರಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ; (ಮಾಹಿತಿ ನೀಡುವುದು)

(ಆ) ಯಾವ ಯಾವ ಅಧಿಕಾರಿಗಳು ಈ ಅವ್ಯವಹಾರದಲ್ಲಿ ಭಾಗಿಯಾಗಿದ್ದಾರೆ ಅವರುಗಳ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ (ವಿವರ ನೀಡುವುದು)

(ಇ) ಈ ಅವ್ಯವಹಾರದಲ್ಲಿ ಸುಮಾರು ಮೊತ್ತದ ಹಣವನ್ನು ಕಾನೂನು ಬಾಹಿರವಾಗಿ ಆಗದೇ ಇರುವ ಕಾಮಗಾರಿಗೆ ಪಾವತಿಸಿದ್ದು ಇದಕ್ಕೆ ಕಾರಣರಾದ ಅಧಿಕಾರಿಗಳಿಂದ ಈ ಹಣವನ್ನು ವಸೂಲಿ ಮಾಡಲು ಯಾವ ಕ್ರಮ ಕೈಗೊಳ್ಳಲಾಗುವುದು ? (ಸ್ಪಷ್ಟ ಮಾಹಿತಿ ನೀಡುವುದು)

# ಲೋಕೋಪಯೋಗಿ ಇಲಾಖೆಯಿಂದ ಕೈಗೊಂಡಿರುವ ಕಾಮಗಾರಿಗಳು

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೩೯೭ (೫೭೯) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಲೋಕೋಪಯೋಗಿ ಇಲಾಖೆಯ ವತಿಯಿಂದ ರಸ್ತೆ ಕಾಮಗಾರಿ, ಹೊಸರಸ್ತೆ/ಕಟ್ಟಡ ಸೇತುವೆ ಹೆದ್ದಾರಿ ಇತರೆ ನಿರ್ಮಾಣ ಕಾಮಗಾರಿಗಳಿಗೆ ವಿವಿಧ ಲೆಕ್ಕ ಶೀರ್ಷಿಕೆ ಅಡಿಯಲ್ಲಿ ಬಿಡುಗಡೆಯಾದ ಅನುದಾನವೆಷ್ಟು ; (ವರ್ಷವಾರು, ಕಾಮಗಾರಿಗಳವಾರು, ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಮಂಜೂರಾಗಿರುವ ಕಾಮಗಾರಿಗಳ ಯಾವ ಯಾವ ಹಂತದಲ್ಲಿವೆ ; ಹಾಗಿದ್ದಲ್ಲಿ, ಕೈಗೊಂಡಿರುವ ಕಾಮಗಾರಿಗಳಿಗೆ ಖರ್ಚು ಮಾಡಲಾದ ಮೊತ್ತದ ವಿವರ ನೀಡುವುದು)

(ಇ) ಮೇಲ್ಕಂಡ ವಿವಿಧ ಕಾಮಗಾರಿಗಳಲ್ಲಿ ಪೂರ್ಣಗೊಂಡಿರುವ ಹಾಗೂ ಅಪೂರ್ಣಗೊಂಡಿರುವ ಕಾಮಗಾರಿಗಳಾವುವು ; ಉಳಿದ ಕಾಮಗಾರಿಗಳನ್ನು ಯಾವಾಗ ಪೂರ್ಣಗೊಳಿಸಲಾಗುವುದು ? (ಪ್ರತ್ಯೇಕ ಕಾಮಗಾರಿವಾರು ಸಂಪೂರ್ಣ ಮಾಹಿತಿ ನೀಡುವುದು)

## ಅಲ್ಪಸಂಖ್ಯಾತರ ಇಲಾಖೆಯಲ್ಲಿರುವ ವಸತಿ ಶಾಲೆಗಳ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು):–**

೩೮೮ (೩೧) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ, ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಡಿಯಲ್ಲಿ ರಾಜ್ಯದಲ್ಲಿ ಎಷ್ಟು ಮುಸ್ಲಿಂ ವಸತಿಶಾಲೆಗಳಿವೆ ; (ಜಿಲ್ಲಾವಾರು ಮಾಹಿತಿ ನೀಡಿ, ಸರಕಾರಿ ಮುಸ್ಲಿಂ ವಸತಿ ಶಾಲೆಗಳಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; ಅದರಲ್ಲಿ ಹೆಣ್ಣು ಮಕ್ಕಳ ಸಂಖ್ಯೆ ಎಷ್ಟು ;

(ಆ) ರಾಜ್ಯದಲ್ಲಿರುವ ಅಲ್ಪಸಂಖ್ಯಾತರ ವಸತಿ ಶಾಲೆಗಳಲ್ಲಿ ಕಲಿಯುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; ಈ ವಸತಿ ಶಾಲೆಗಳಲ್ಲಿ ಯಾವ ಯಾವ ಧರ್ಮದ ಅಲ್ಪಸಂಖ್ಯಾತರು ವಿದ್ಯಾಭ್ಯಾಸ ಮಾಡುತ್ತಿದ್ದಾರೆ ; (ಜಾತಿವಾರು ಜಿಲ್ಲಾವಾರು ವಿವರ ನೀಡುವುದು)

(ಇ) ೧೯–೦೫–೨೦೧೮ ರ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ನಿರ್ದೇಶಕರ ಆದೇಶದಲ್ಲಿ ಇಲಾಖೆಯ ಆಡಳಿತಕ್ಕೆ ಒಳಪಡುವ ಎಲ್ಲಾ ವಸತಿ ಶಾಲೆಗಳಲ್ಲಿ ಅರೆಬಿಕ್ ಶಿಕ್ಷಣ ಭೋಧಿಸಲು ಅತಿಥಿ ಶಿಕ್ಷಕರನ್ನು ನೇಮಿಸಿಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಕುರಿತು ಸರ್ಕಾರದ ನಿಲುವೇನು ;

(ಈ) ಇಲಾಖೆಯ ವತಿಯಿಂದ ನಡೆಯುತ್ತಿರುವ ವಸತಿ ಶಾಲೆಗಳಲ್ಲಿ ಮುಸ್ಲಿಂ ವಿದ್ಯಾರ್ಥಿಗಳನ್ನು ಹೊರತುಪಡಿಸಿ ಇತರ ಧರ್ಮದ ವಿದ್ಯಾರ್ಥಿಗಳೂ ವಿದ್ಯಾಭ್ಯಾಸ ಮಾಡುತ್ತಿರುವುದರಿಂದ ಈ ವಿದ್ಯಾರ್ಥಿಗಳಿಗೂ ಅರೆಬಿಕ್ ಶಿಕ್ಷಣ ಮತ್ತು ಶುಕ್ರವಾರದ

ಪ್ರಾರ್ಥನೆಯನ್ನು ಕಡ್ಡಾಯಗೊಳಿಸಿ ಹೊರಡಿಸಿರುವ ಆದೇಶವು ಕಾನೂನು ಸುವ್ಯವಸ್ಥೆಗೆ ಧಕ್ಕೆಯುಂಟು ಮಾಡುವ ಬಗ್ಗೆ ಸರ್ಕಾರದ ನಿಲುವೇನು ?

## ಗೃಹ ಇಲಾಖೆಯಲ್ಲಿ ಅನರ್ಹರ ನೇಮಕಾತಿ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು):–**

೩೯ (೨೧೫) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ನ್ಯಾಯ ವಿಜ್ಞಾನ ಪ್ರಯೋಗಾಲಯದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ನಿರ್ದೇಶಕರಿಗೆ ಇರಬೇಕಾದ ವಿದ್ಯಾರ್ಹತೆ ಏನು ; ಪ್ರಸ್ತುತ ಕರ್ತವ್ಯ ನಿರ್ವಹಿಸುತ್ತಿರುವ ನಿರ್ದೇಶಕರು ಹೊಂದಿರುವ ವಿದ್ಯಾರ್ಹತೆ ಏನು ;

(ಆ) ನ್ಯಾಯ ವಿಜ್ಞಾನ ಪ್ರಯೋಗಾಲಯದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸೈಬರ್ ವಿಭಾಗದ ವರದಿ ನೀಡುವ ದಾಖಲೆಗಳಿಗೆ ಸಹಿ ಮಾಡಲು ಅರ್ಹರಿರುವ ಅಧಿಕಾರಿಗಳು ಯಾವ ಪದವಿಯನ್ನು ಹೊಂದಿರುತ್ತಾರೆ ;

(ಇ) ಅರ್ಹ ವಿದ್ಯಾಭ್ಯಾಸ ಪಡೆಯದೆ ಕೇವಲ ೩ ತಿಂಗಳ ತರಬೇತಿ ಪಡೆದಿರುವ ಯಾವುದೇ ವ್ಯಕ್ತಿಯು ಸೈಬರ್ ವಿಭಾಗದಲ್ಲಿ ಕರ್ತವ್ಯ ನಿರ್ವಹಿಸಲು ಅರ್ಹರೆ ; ಹಾಗಿದ್ದಲ್ಲಿ, ನೇಮಕ ಪ್ರಕ್ರಿಯೆ ಸಂದರ್ಭದಲ್ಲಿ ಅರ್ಹ ವಿದ್ಯಾಭ್ಯಾಸದ ಕುರಿತು ಮಾಹಿತಿ ಪಡೆಯುವ ಅವಶ್ಯಕತೆ ಇದೆಯೇ ; ಯಾವುದೇ ಅರ್ಹತೆ ಇಲ್ಲದ ವ್ಯಕ್ತಿಯನ್ನು ನೇಮಕ ಮಾಡಿ ಆ ಬಳಿಕ ೩ ತಿಂಗಳ ತರಬೇತಿ ನೀಡಿದ್ದಲ್ಲಿ, ಎಮ್.ಎಸ್ಸಿ, ಕಂಪ್ಯೂಟರ್ ಸೈನ್ಸ್ ಪದವಿಗೆ ಸರಿಸಮ ಎಂದಂತಾಗಲಿಲ್ಲವೇ ; ಈ ಕುರಿತು ಸರ್ಕಾರದ ನಿಲುವೇನು ;

(ಈ) ಸಿಬ್ಬಂದಿಗಳ ಕೊರತೆಯ ನೆಪವೊಡ್ಡಿ ಅನರ್ಹರನ್ನು ಸೈಬರ್ ವಿಭಾಗಕ್ಕೆ ನೇಮಕ ಮಾಡಿ ೩ ತಿಂಗಳ ತರಬೇತಿ ನೀಡಲಾಗಿದೆ ಎಂದರೆ ಸೈಬರ್ ವಿಭಾಗದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವವರು ನೇಮಕಾತಿ ಸಂದರ್ಭದಲ್ಲಿ ಅರ್ಹ ವಿದ್ಯಾಭ್ಯಾಸ ಹೊಂದಿಲ್ಲ ಎಂಬುದನ್ನು ಒಪ್ಪಿಕೊಂಡಂತಾಗಿದ್ದು ಈ ರೀತಿಯಾಗಿ ಅನರ್ಹರನ್ನು ನೇಮಕ ಮಾಡಿದವರ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ?

## ಸುರತ್ಕಲ್ ರೈಲು ನಿಲ್ದಾಣದ ಪಾರ್ಕಿಂಗ್ ಸಮಸ್ಯೆ

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು):–**

೪೦೦ (೨೧೬) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ದಕ್ಷಿಣ ಕನ್ನಡ ಜಿಲ್ಲೆಯ ಸುರತ್ಕಲ್ ರೈಲು ನಿಲ್ದಾಣದಲ್ಲಿ ಪಾರ್ಕಿಂಗ್ ಸಮಸ್ಯೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಸಮಸ್ಯೆಯನ್ನು ಪರಿಹರಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಆ) ಈ ರೈಲು ನಿಲ್ದಾಣಕ್ಕೆ ಆಗಮಿಸುವ ಅಥವಾ ರೈಲು ನಿಲ್ದಾಣದಲ್ಲಿ ವಾಹನ ನಿಲುಗಡೆಗೊಳಿಸಿ ದೂರದ ಸ್ಥಳಗಳಿಗೆ ಪ್ರಯಾಣಿಸುವ ಪ್ರಯಾಣಿಕರು ರೈಲು ನಿಲ್ದಾಣದಿಂದ ನಗರಪಾಲಿಕೆ ನಿರ್ಮಿಸಿದ ರಸ್ತೆಗೆ ಅಡ್ಡಲಾಗಿ ವಾಹನಗಳನ್ನು ನಿಲ್ಲಿಸುತ್ತಿರುವುದರಿಂದ ಕಾನೂನು ಸುವ್ಯವಸ್ಥೆಯ ಸಮಸ್ಯೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಸಮಸ್ಯೆಯನ್ನು ಪರಿಹರಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಇ) ಈ ರೈಲು ನಿಲ್ದಾಣದಲ್ಲಿ ರಿಕ್ಷಾ, ಟ್ಯಾಕ್ಸಿ ಮತ್ತು ದ್ವಿಚಕ್ರ ವಾಹನಗಳಿಗೆ ಪಾರ್ಕಿಂಗ್ ವ್ಯವಸ್ಥೆ ಕಲ್ಪಿಸುವ ಬಗ್ಗೆ ಮತ್ತು ರೈಲು ನಿಲ್ದಾಣವನ್ನು

ಸಂಪರ್ಕಿಸುವ ರಸ್ತೆಯ ಇಕ್ಕೆಲಗಳಲ್ಲಿ ಸೇವೆ ಬಳಸುವ ಲಾರಿಗಳು ನಿಲ್ಲುತ್ತಿರುವುದರಿಂದ ರೈಲು ಪ್ರಯಾಣಿಕರಿಗೆ ಆಗುತ್ತಿರುವ ಸಮಸ್ಯೆಯನ್ನು ಪರಿಹರಿಸಲು ಕೈಗೊಂಡ ಕ್ರಮಗಳೇನು ?

## ನೈಸ್ ಸಂಸ್ಥೆಯ ಅಕ್ರಮಗಳ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು):–**

೪೦೧ (೨೧೭) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ನೈಸ್ ಸಂಸ್ಥೆಯೊಂದಿಗೆ ದಿನಾಂಕ: ೦೩–೦೪–೧೯೯೭ ರ ಕ್ರಿಯಾ ಒಪ್ಪಂದದಂತೆ ಎಲ್ಲಾ ಟೋಲ್ ರಸ್ತೆಗಳನ್ನು ಸಿಮೆಂಟ್ ಕಾಂಕ್ರೀಟ್ ರಸ್ತೆಯಾಗಿ ನಿರ್ಮಿಸಬೇಕಾಗಿದ್ದು, ಒಪ್ಪಂದ ಉಲ್ಲಂಘಿಸಿರುವ ಕಾರಣ ಯಾವ ಕ್ರಮಕೈಗೊಳ್ಳಲಾಗಿದೆ ;

(ಆ) ನೈಸ್ ಸಂಸ್ಥೆಯೊಂದಿಗೆ ದಿನಾಂಕ: ೦೩–೦೪–೧೯೯೭ ರ ಕ್ರಿಯಾ ಒಪ್ಪಂದದಂತೆ ಕಾರ್ಯ ನಿರ್ವಹಿಸದಿರುವ ಕುರಿತು ಕ್ರಿಮಿನಲ್ ಪ್ರಕರಣ ದಾಖಲು ಮಾಡಲಾಗಿದೆಯೇ ; ಒಪ್ಪಂದದಂತೆ ಕಾರ್ಯ ನಿರ್ವಹಿಸದಿರುವವರ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಇ) ರಾಜ್ಯದ ಜನತೆಗೆ ಮೋಸ ಮಾಡಿರುವ ಬಗ್ಗೆ ನೈಸ್ ಸಂಸ್ಥೆಯ ಮೇಲೆ ರಾಜದ್ರೋಹದ ಪ್ರಕರಣ ದಾಖಲಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ; ಈ ಕುರಿತು ಕ್ರಮ ಕೈಗೊಳ್ಳಲು ನಿರ್ಲಕ್ಷ್ಯ ತೋರಿದ ಅಧಿಕಾರಿಗಳ ಮೇಲೆ ವಿಚಾರಣೆಗೆ ಆದೇಶ ನೀಡಲಾಗಿದೆಯೇ ;

(ಈ) ರಾಜ್ಯದ ಜನತೆಗೆ ಮೋಸ ಮಾಡಿದ ಬಳಿಕವೂ ಟೋಲ್ ಸಂಗ್ರಹಿಸುತ್ತಿರುವುದು ಅಕ್ಷಮ್ಯ ಅಪರಾಧವಾಗಿದ್ದು, ನೈಸ್ ರಸ್ತೆಯಲ್ಲಿ ಟೋಲ್ ಸಂಗ್ರಹವನ್ನು ನಿಲ್ಲಿಸಲು ಯಾವ ಕ್ರಮ ಕೈಗೊಳ್ಳಲಾಗಿದೆ ?

# ಬೆಂಗಳೂರು ಮಹಾನಗರ ಪಾಲಿಕೆ ಸಂಗ್ರಹಿಸಿದ ಆಸ್ತಿ ತೆರಿಗೆ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು):–**

೪೦೨ (೨೧೮)ಮಾನ್ಯ ಉಪ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೩–೧೪ರಿಂದ ೨೦೧೬–೧೭ರ ಅವಧಿಯಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯು ಸಂಗ್ರಹಿಸಿದ ಆಸ್ತಿ ತೆರಿಗೆಯ ಮೊತ್ತವೆಷ್ಟು ;

(ಆ) ೨೦೧೩–೧೪ರಿಂದ ೨೦೧೬–೧೭ರ ಅವಧಿಯಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯು ಆಸ್ತಿ ತೆರಿಗೆಯ ಮೇಲೆ ಯಾವ ಯಾವ ಸೆಸ್‌ಗಳನ್ನು ಹೆಚ್ಚುವರಿ ತೆರಿಗೆಯ ರೂಪದಲ್ಲಿ ಹಾಕಲಾಗಿತ್ತು ; ಈ ಸೆಸ್ ಹೆಚ್ಚುವರಿ ತೆರಿಗೆಯ ಪ್ರಮಾಣವೆಷ್ಟು ; ಈ ಹೆಚ್ಚುವರಿ ತೆರಿಗೆಯನ್ನು ಯಾವ ಕಾರಣಕ್ಕಾಗಿ ಬಳಸಬೇಕಾಗಿತ್ತು ;

(ಇ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯು ೨೦೧೩–೧೪ ರಿಂದ ೨೦೧೬–೧೭ರ ಅವಧಿಯಲ್ಲಿ ಆಸ್ತಿ ತೆರಿಗೆಯ ನಗರ ಸಾರಿಗೆ ವ್ಯವಸ್ಥೆಯನ್ನು ಸುಧಾರಿಸುವ ನಿಟ್ಟಿನಲ್ಲಿ ವಿಧಿಸಿರುವ ಹೆಚ್ಚುವರಿ ತೆರಿಗೆ (ಸೆಸ್) ಪ್ರಮಾಣವೆಷ್ಟು ; ಈ ಮೂಲಕ ಸಂಗ್ರಹಿಸಲಾದ ತೆರಿಗೆಯ ಮೊತ್ತವೆಷ್ಟು ;

(ಈ) ಈ ಹೆಚ್ಚುವರಿ ತೆರಿಗೆಯನ್ನು ಸಂಗ್ರಹಿಸಿಲ್ಲವೆಂದಾದಲ್ಲಿ ಅದಕ್ಕೆ ಕಾರಣಗಳೇನು ; ಯಾವ ಅಧಿಕಾರಿಯನ್ನು ಜವಾಬ್ದಾರರನ್ನಾಗಿಸಲಾಗಿದೆ ; ಈ ತೆರಿಗೆ ನಷ್ಟವನ್ನು ಸಂಬಂಧಿಸಿದ ಅಧಿಕಾರಿಯಿಂದ ವಸೂಲು ಮಾಡಲು ತೆಗೆದುಕೊಂಡ ಕ್ರಮಗಳೇನು ;

## ಬೆಂಗಳೂರು ನಗರದಲ್ಲಿರುವ ಕೆರೆಗಳ ಬಗ್ಗೆ

**ಶ್ರೀ ಪಿ. ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು):–**

೪೦೩ (೫೪೪) ಮಾನ್ಯ ಉಪ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರದಲ್ಲಿರುವ ಒಟ್ಟು ಕೆರೆಗಳ ಸಂಖ್ಯೆ ಎಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಅವುಗಳಲ್ಲಿ ಎಷ್ಟು ಕೆರೆಗಳು ನಾಶವಾಗಿವೆ ; ಹಾಗೂ ಭೂ ಒತ್ತುವರಿಯಾಗಿವೆ ;

(ಇ) ಅದರಲ್ಲಿ ಎಷ್ಟು ಕೆರೆಗಳು ದುರ್ವಾಸನೆಯಿಂದ ಕೂಡಿವೆ ; ಅವು ಯಾವುವು ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಇಂತರಹ ದುರ್ವಾಸನೆಯಿಂದ ಕೂಡಿದ ಕೆರೆಗಳಿಂದ ಅಂತರ್ಜಲ ಕಲುಷಿತವಾಗಿರುವ ಪ್ರಕರಣಗಳೆಷ್ಟು ? (ಸಂಪೂರ್ಣ ಮಾಹಿತಿ ನೀಡುವುದು)

## ಪಿ.ಎಂ.ಎ.ವೈ ಯೋಜನೆಯಡಿ ಮನೆಗಳ ನಿರ್ಮಾಣದ ಗುರಿಯ ಬಗ್ಗೆ

**ಶ್ರೀ ಪಿ. ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು):–**

೪೦೪ (೫೪೫) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೪–೧೫ ರಿಂದ ೨೦೧೮–೧೯ ಸಾಲಿನವರೆಗೆ ಪಿ.ಎಂ.ಎ.ವೈ ಯೋಜನೆಯಡಿಯಲ್ಲಿ ಎಷ್ಟು ಸಂಖ್ಯೆಯ ಮನೆಗಳನ್ನು ಸ್ಲಂಬೋರ್ಡ್ ಮತ್ತು ರಾಜೀವ್ ಗಾಂಧಿ ವಸತಿ ನಿಗಮದಿಂದ ರಚಿಸಲಾಗಿದೆ ; ಇದರಲ್ಲಿ ಕೇಂದ್ರದ ಪಾಲು, ರಾಜ್ಯದ ಪಾಲು ಹಾಗೂ ಫಲಾನುಭವಿಗಳ ಪಾಲುಗಳ ಬಗ್ಗೆ ಸಂಪೂರ್ಣ ಮಾಹಿತಿ ನೀಡುವುದು ;

(ಆ) ೨೦೦೮–೦೯ ರಿಂದ ೨೦೧೪–೧೫ನೇ ಸಾಲಿನವರೆಗೆ ಕೇಂದ್ರ ಹಾಗೂ ರಾಜ್ಯ ಸರ್ಕಾರದಡಿಯಲ್ಲಿ ಕೈಗೊಂಡ ವಸತಿ ಯೋಜನೆಗಳಿಗೆ ಸಂಬಂಧಿಸಿದಂತೆ ರಾಜೀವ್‌ಗಾಂಧಿ ವಸತಿ ನಿಗಮದಿಂದ ನಿರ್ಮಿಸಿರುವ ಮನೆಗಳ ಸಂಖ್ಯೆ ಎಷ್ಟು ; ಸ್ಲಂಬೋರ್ಡ್ ವತಿಯಿಂದ ನಿರ್ಮಿಸಿರುವ ಮನೆಗಳೆಷ್ಟು ; ಎಲ್ಲಾ ಯೋಜನೆಗಳಿಗೆ ಕೇಂದ್ರದ ಪಾಲು, ರಾಜ್ಯದ ಪಾಲು ಹಾಗೂ ಫಲಾನುಭವಿಗಳ ಪಾಲುಗಳ ಬಗ್ಗೆ ಸಂಪೂರ್ಣ ಮಾಹಿತಿ ನೀಡುವುದು ;

(ಇ) ಬೆಂಗಳೂರು ನಗರದಲ್ಲಿ ಬಡವರಿಗೆ ಮನೆಗಳನ್ನು ನಿರ್ಮಿಸುವ ಯೋಜನೆ (ಕೊಳಗೇರಿ ಇಲಾಖೆ ಹೊರತುಪಡಿಸಿ) ಇದೆಯೇ ; ಇದ್ದಲ್ಲಿ, ಇಲ್ಲಿಯವರೆಗೆ ತೆಗೆದುಕೊಂಡ ಕ್ರಮದ ಬಗ್ಗೆ ಮಾಹಿತಿ ನೀಡುವುದು ?

## ಕರ್ನಾಟಕ ರಾಜ್ಯದಲ್ಲಿ ಸ್ಥಳೀಯ ಸಂಸ್ಥೆಗಳ ಕುರಿತು

**ಶ್ರೀ ಪಿ. ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು):–**

೪೦೫ (೫೯೭) ಮಾನ್ಯ ಪೌರಾಡಳಿತ ಮತ್ತು ಸ್ಥಳೀಯ ಸಂಸ್ಥೆಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯದಲ್ಲಿ Large Urban Areas & Small Urban Areas ಒಟ್ಟು ಸ್ಥಳೀಯ ಸಂಸ್ಥೆಗಳ ಸಂಖ್ಯೆ ಎಷ್ಟಿವೆ ; ಈ ಎಲ್ಲಾ ಸ್ಥಳೀಯ ಸಂಸ್ಥೆಗಳು ಸಂವಿಧಾನಾತ್ಮಕವಾಗಿ ಕಾರ್ಯನಿರ್ವಹಿಸುತ್ತಿವೆಯೇ ;

(ಆ) ಎಲ್ಲಾ ಸ್ಥಳೀಯ ಸಂಸ್ಥೆಗಳಲ್ಲಿ ವಾರ್ಡ್ ಕಮಿಟಿಗಳು ರಚನೆಯಾಗಿವೆಯೇ ; ರಚನೆಯಾಗಿದ್ದಲ್ಲಿ, ಅವುಗಳ ವಿವರಗಳನ್ನು ನೀಡುವುದು ;

(ಇ) ರಾಜ್ಯದ ಎಲ್ಲಾ ಸ್ಥಳೀಯ ಸಂಸ್ಥೆಗಳಲ್ಲಿ ಒಳಚರಂಡಿ ವ್ಯವಸ್ಥೆ ಇದೆಯೇ ; ಇದ್ದಲ್ಲಿ ಎಷ್ಟು ಸ್ಥಳೀಯ ಸಂಸ್ಥೆಗಳಿಗೆ ಎಸ್‌ಟಿಪಿ (ಶುದ್ಧೀಕರಣ ಘಟಕಗಳು) ಇವೆ ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ರಾಜ್ಯದ ಎಲ್ಲಾ ಸ್ಥಳೀಯ ಸಂಸ್ಥೆಗಳಲ್ಲಿ ಕುಡಿಯುವ ನೀರಿನ ಮೂಲಗಳ ಬಗ್ಗೆ ಮಾಹಿತಿ ನೀಡುವುದು ;

(ಉ) ಎಷ್ಟು ಸ್ಥಳೀಯ ಸಂಸ್ಥೆಗಳು ಕುಡಿಯುವ ನೀರಿನ ಶುದ್ಧೀಕರಣ ಘಟಕ ಹೊಂದಿರುತ್ತವೆ ? (ಆರ್.ಓ. ಪ್ಲಾಂಟ್) (ಸಂಪೂರ್ಣ ಮಾಹಿತಿ ನೀಡುವುದು)

## ಬೆಂಗಳೂರು ನಗರದಲ್ಲಿ ಕಂದಾಯ ಭೂಮಿಯ ಭೂಪರಿವರ್ತನೆ ಬಗ್ಗೆ

**ಶ್ರೀ ಪಿ. ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು):–**

೪೦೬ (೫೮) ಮಾನ್ಯ ಉಪ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರ ಜಿಲ್ಲೆಯ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಕಂದಾಯ ಭೂಮಿಯಲ್ಲಿ ಭೂಪರಿವರ್ತನೆಯಾಗದೆ ಅನಧಿಕೃತವಾಗಿ ಬಡಾವಣೆಗಳು / ನಿವೇಶನಗಳನ್ನು ನಿರ್ಮಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಯಾವ ಯಾವ ವಾರ್ಡ್‌ಗಳಲ್ಲಿ ಭೂ ಪರಿವರ್ತನೆಯಾಗದೆ ಅನಧಿಕೃತವಾಗಿ ಕಂದಾಯ ಭೂಮಿಗಳಲ್ಲಿ ಬಡಾವಣೆ / ಮನೆಗಳು ನಿರ್ಮಾಣವಾಗಿವೆ ; (ಮಾಹಿತಿ ನೀಡುವುದು)

(ಇ) ಕಂದಾಯ ಭೂಮಿಗಳ ಮೇಲೆ ಅನಧಿಕೃತವಾಗಿ ನಿರ್ಮಾಣವಾಗಿರುವ ಮನೆಗಳು ಹಾಗೂ ಅಭಿವೃದ್ಧಿಯಾಗಿರುವ ಬಡಾವಣೆಗಳ ಬಗ್ಗೆ ಸರ್ಕಾರದ ಮುಂದಿನ ಕ್ರಮಗಳೇನು ? (ವಿವರ ನೀಡುವುದು)

## ಅಲ್ಪಸಂಖ್ಯಾತರ ಕಲ್ಯಾಣ ಕಾರ್ಯಕ್ರಮಗಳ ಬಗ್ಗೆ

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೦೭ (೪೪೬) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳು, ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅಲ್ಪಸಂಖ್ಯಾತರ ಅಭಿವೃದ್ಧಿಗೆ ೨೦೧೮–೧೯ನೇ ಸಾಲಿನ ಬಜೆಟ್‌ನಲ್ಲಿ ಸರ್ಕಾರ ಘೋಷಿಸಿದ ಅನುದಾನ ಎಷ್ಟು; ಇದರಲ್ಲಿ ಖರ್ಚು ಮಾಡಲಾದ ಅನುದಾನ ಎಷ್ಟು; (ಮಾಹಿತಿ ಒದಗಿಸುವುದು)

(ಆ) ೨೦೧೮–೧೯ನೇ ಸಾಲಿನಲ್ಲಿ ಚಿತ್ರದುರ್ಗ ಹಾಗೂ ದಾವಣಗೆರೆ ಜಿಲ್ಲೆಗಳಿಗೆ ಅಲ್ಪಸಂಖ್ಯಾತರ ಇಲಾಖೆಯಿಂದ ನೀಡಲಾದ ಅನುದಾನ ಎಷ್ಟು; ಇದರಿಂದ ಕೈಗೊಂಡಿರುವ ಅಭಿವೃದ್ಧಿ ಕಾರ್ಯಗಳಾವುವು; (ಮಾಹಿತಿ ಒದಗಿಸುವುದು)

(ಇ) ಅಲ್ಪಸಂಖ್ಯಾತರ ಇಲಾಖೆಯಿಂದ ಅನುಷ್ಠಾನಗೊಂಡಿರುವ ವಿವಿಧ ಕಲ್ಯಾಣ ಕಾರ್ಯಕ್ರಮಗಳಾವುವು ?(ಪಟ್ಟಿ ಒದಗಿಸುವುದು)

## ಬೆಂಗಳೂರು ನಗರ ಅಭಿವೃದ್ಧಿ ಪ್ರಾಧಿಕಾರದ ಬಗ್ಗೆ

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೦೮ (೪೪೭) ಮಾನ್ಯ ಉಪ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರಾಭಿವೃದ್ಧಿ ಪ್ರಧಿಕಾರದ ವತಿಯಿಂದ ಕಳೆದ ೫ ವರ್ಷಗಳಲ್ಲಿ ಅಭಿವೃದ್ಧಿಪಡಿಸಿರುವ ಬಡಾವಣೆಗಳ ಸಂಖ್ಯೆ ಎಷ್ಟು ; (ಮಾಹಿತಿ ಒದಗಿಸುವುದು)

(ಆ) ಈ ಬಡಾವಣೆಗಳಲ್ಲಿ ಇರುವ ನಿವೇಶನಗಳ ಸಂಖ್ಯೆ ಎಷ್ಟು; ಅದರಲ್ಲಿ ಅರ್ಜಿದಾರರಿಗೆ ಹಂಚಿಕೆಯಾದ ನಿವೇಶನಗಳ ಸಂಖ್ಯೆ ಎಷ್ಟು; (ಮಾಹಿತಿ ಒದಗಿಸುವುದು)

(ಇ) ಈ ಬಡಾವಣೆಗಳಲ್ಲಿ ಮೂಲಭೂತ ಸೌಕರ್ಯಗಳ ಕೊರತೆಯಿರುವುದು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಅದನ್ನು ಸರಿಪಡಿಸಲು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಕೈಗೊಂಡಿರುವ ಕ್ರಮಗಳೇನು ? (ಮಾಹಿತಿ ಒದಗಿಸುವುದು)

## ಬೆಂಗಳೂರು ನಗರ ಕೆರೆ ಅಭಿವೃದ್ಧಿಗಳ ಬಗ್ಗೆ

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೦೯ (೪೪೮) ಮಾನ್ಯ ಉಪ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರದ ವಿವಿಧ ಬಡಾವಣೆಗಳಲ್ಲಿರುವ ಕೆರೆಗಳ ಸಂಖ್ಯೆ ಎಷ್ಟು; (ಪಟ್ಟಿ ನೀಡುವುದು)

(ಆ) ಕಳೆದ ೫ ವರ್ಷಗಳಲ್ಲಿ ಈ ಕೆರೆಗಳ ಅಭಿವೃದ್ಧಿಗೆ ಸರ್ಕಾರ ಬಿಡುಗಡೆ ಮಾಡಿರುವ ಅನುದಾನ ಎಷ್ಟು; (ಮಾಹಿತಿ ನೀಡುವುದು)

(ಇ) ಬೆಳ್ಳಂದೂರು ಕೆರೆ ಅಭಿವೃದ್ಧಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಮಾಹಿತಿ ಒದಗಿಸುವುದು)

# ಬಿಡಿಎನಲ್ಲಿ ಅಗತ್ಯಕ್ಕಿಂತ ಹೆಚ್ಚು ಎರವಲು ಸೇವಾ ಅಧಿಕಾರಿ/ ನೌಕರರು ಕಾರ್ಯ ನಿರ್ವಹಿಸುತ್ತಿರುವ ಬಗ್ಗೆ

**ಶ್ರೀ ಎಸ್. ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) :–**

೪೧೦ (೪೩೬) ಮಾನ್ಯ ಉಪ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಲ್ಲಿ ಎರವಲು ಸೇವೆಯ ಆಧಾರದ ಮೇಲೆ ಯಾವ ಯಾವ ಇಲಾಖೆಗಳ ಇಂಜಿನೀಯರ್‌ಗಳು ಮತ್ತು ಪೊಲೀಸ್ ಇಲಾಖೆಯ ಎಷ್ಟು ಜನರು ಕರ್ತವ್ಯ ನಿರ್ವಹಿಸುತ್ತಿದ್ದಾರೆ; ಇವರು ಯಾವ ಯಾವ ಹುದ್ದೆಗಳಲ್ಲಿ ಎಷ್ಟು ವರ್ಷಗಳಿಂದ ಕರ್ತವ್ಯ ನಿರ್ವಹಿಸುತ್ತಿದ್ದಾರೆ; (ಹೆಸರು, ಹುದ್ದೆವಾರು ವಿವರ ನೀಡುವುದು)

(ಆ) ಸದರಿ ಅಧಿಕಾರಿ/ನೌಕರರಲ್ಲಿ ಒಂದಕ್ಕಿಂತ ಹೆಚ್ಚು ಬಾರಿ ಎರವಲು ಸೇವೆ ಆಧಾರದಲ್ಲಿ ಪ್ರಾಧಿಕಾರಕ್ಕೆ ನಿಯೋಜನೆಗೊಂಡವರು ಯಾರ್‍ಯಾರು; ಎಷ್ಟು ಬಾರಿ ನಿಯೋಜನೆಗೊಂಡಿರುತ್ತಾರೆ; (ಹೆಸರು, ನಿಯೋಜನೆಗೊಂಡ ದಿನಾಂಕ ಮತ್ತು ಬಿಡುಗಡೆಗೊಳಿಸಿರುವ ದಿನಾಂಕವಾರು ವಿವರ ನೀಡುವುದು)

(ಇ) ಪ್ರಾಧಿಕಾರದಲ್ಲಿ ಅವಶ್ಯಕತೆಗಿಂತ ಹೆಚ್ಚಿನ ಸಂಖ್ಯೆಯ ಅಧಿಕಾರಿ/ ನೌಕರರನ್ನು ನಿಯೋಜನೆ ಮೇಲೆ ತೆಗೆದುಕೊಂಡಿರುವುದು ನಿಜವೇ; ಆರಕ್ಷಕರಾಗಿ ಸಾಮಾಜಿಕ ಕೆಲಸದಲ್ಲಿ ಸೇವೆ ಮಾಡಬೇಕಾದ ಪೊಲೀಸರು ಅನಗತ್ಯವಾಗಿ ಪ್ರಾಧಿಕಾರದ ಎಕ್ಸಿಕ್ಯೂಟಿವ್ ಸಿಬ್ಬಂದಿ ವಿಭಾಗದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವುದು ನಿಜವೇ ಇದನ್ನು ಸರಿಪಡಿಸಲು ಕೈಗೊಳ್ಳುವ ಕ್ರಮಗಳೇನು;

(ಈ) ಪ್ರಾಧಿಕಾರದಲ್ಲಿಯೇ ಅರ್ಹ ಅಧಿಕಾರಿ/ನೌಕರರು ಲಭ್ಯವಿದ್ದರೂ ಮತ್ತು ಅನುಕಂಪದಲ್ಲಿ ನೇಮಕ ಮಾಡಬೇಕಾದ ಅಭ್ಯರ್ಥಿಗಳನ್ನು ಕಡೆಗಣಿಸಿ ಅನಗತ್ಯವಾಗಿ ಎರವಲು ಸೇವೆಯ ಮೇಲೆ ಅಧಿಕಾರಿ/ನೌಕರರನ್ನು ತೆಗೆದುಕೊಳ್ಳುತ್ತಿರುವುದಕ್ಕೆ ಕಾರಣಗಳೇನು ?

## ಕಳೆದ ೪ ವರ್ಷಗಳಲ್ಲಿ ಗದಗ ಜಿಲ್ಲೆಯಲ್ಲಿ ನಡೆದ ದರೋಡೆ ಹಾಗೂ ಕೊಲೆ ಪ್ರಕರಣಗಳ ಮಾಹಿತಿ

**ಶ್ರೀ ಎಸ್. ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) :–**

೪೧೧ (೫೭೨) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೪ ವರ್ಷಗಳಲ್ಲಿ (೨೦೧೫ ರಿಂದ ೨೦೧೯ರವರೆಗೆ) ಗದಗ ಜಿಲ್ಲೆಯ ವಿವಿಧ ತಾಲ್ಲೂಕುಗಳಲ್ಲಿ ಎಷ್ಟು ಮನೆಗಳ ಮತ್ತು ಅಂಗಡಿಗಳ ದರೋಡೆ ಹಾಗೂ ಕೊಲೆ ಪ್ರಕರಣಗಳು ದಾಖಲಾಗಿರುತ್ತದೆ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಈ ದರೋಡೆ ಹಾಗೂ ಕೊಲೆ ಪ್ರಕರಣಗಳಲ್ಲಿ ಎಷ್ಟನ್ನು ಪತ್ತೆ ಮಾಡಿ ಅನ್ಯಾಯಕ್ಕೆ ಒಳಗಾದವರಿಗೆ ನ್ಯಾಯ ಒದಗಿಸಲಾಗಿದೆ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಜನವರಿ ೨೦೧೫ ರಲ್ಲಿ ಗದಗ–ಬೆಟಗೇರಿ ಶಹರದ ಬಸವೇಶ್ವರ ಸರ್ಕಲ್ ಹತ್ತಿರ ಇರುವ ಆಭರಣ ಅಂಗಡಿ ಕಳುವಾಗಿದ್ದು, ಇದರ ತನಿಖೆ ಯಾವ ಹಂತದಲ್ಲಿದೆ ? (ವಿವರ ನೀಡುವುದು)

## ಮಳಖೇಡದಲ್ಲಿನ ಕಾಗಿಣಾ ಸೇತುವೆ ಪ್ರವಾಹ ಬಂದಾಗೊಮ್ಮೆ ಸಂಚಾರ ಸ್ಥಗಿತಗೊಳ್ಳುತ್ತಿರುವ ಬಗ್ಗೆ

**ಶ್ರೀ ತಿಪ್ಪಣ್ಣ ಕಮಕನೂರ (ನಾಮನಿರ್ದೇಶನ ಹೊಂದಿದವರು):–**

೪೧೨ (೪೧೯) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ಜಿಲ್ಲೆಯ ಸೇಡಂ ತಾಲ್ಲೂಕಿನ ಮಳಖೇಡದಲ್ಲಿನ ಕಾಗಿಣಾ ಸೇತುವೆ ಪ್ರವಾಹ ಬಂದ ಸಮಯದಲ್ಲಿ ಮುಳುಗಿ ಸಂಚಾರ ಸ್ಥಗಿತಗೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಹೊಸ ಸೇತುವೆ ನಿರ್ಮಾಣ ಮಾಡಲು ಸರ್ಕಾರ ಕ್ರಮ ಕೈಗೊಂಡಿದೆಯೇ;

(ಇ) ಹೊಸ ಸೇತುವೆ ಮಂಜೂರಾಗಿದ್ದಲ್ಲಿ ಯಾವಾಗ ಕಾಮಗಾರಿಯನ್ನು ಪ್ರಾರಂಭಿಸಲಾಗುವುದು ? (ವಿವರ ನೀಡುವುದು)

## ಗಂಗಮತಸ್ಥ ಸಮಾಜದ ಮೇಲೆ ದೂರು ದಾಖಲಾದ ಬಗ್ಗೆ

**ಶ್ರೀ ತಿಪ್ಪಣ್ಣ ಕಮಕನೂರ (ನಾಮನಿರ್ದೇಶನ ಹೊಂದಿದವರು):–**

೪೧೩ (೪೨೦) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಲಿ, ಗಂಗಮತಸ್ಥ, ಬೆಸ್ತ ಹಾಗೂ ಇನ್ನಿತರೆ ಉಪ ಜಾತಿ ಸಮುದಾಯಗಳ ಮೇಲೆ ರಾಜ್ಯಾದ್ಯಂತ ದಾಖಲಾಗಿರುವ ಪೊಲೀಸ್ ಪ್ರಕರಣಗಳ ಸಂಖ್ಯೆ ಎಷ್ಟು;

(ಆ) ಯಾವ ಪ್ರಕರಣಗಳ ಮೇಲೆ ದೂರು ದಾಖಲಾಗಿವೆ ; ಇದರಲ್ಲಿ ಕಲಬುರಗಿ ಜಿಲ್ಲೆಯ ವ್ಯಾಪ್ತಿಯಲ್ಲಿ ದಾಖಲಾದ ಪ್ರಕರಣಗಳ ಸಂಖ್ಯೆ ಎಷ್ಟು;

(ಇ) ಕಲಬುರಗಿ ಜಿಲ್ಲೆ ಕೇಂದ್ರ ಕಾರಾಗೃಹದಲ್ಲಿರುವ ಅಪರಾಧಿಗಳ ಸಂಖ್ಯೆ ಎಷ್ಟು ? (ಸಂಪೂರ್ಣ ವಿವರ ನೀಡುವುದು)

**ಕಲಬುರಗಿ ವಿಮಾನ ನಿಲ್ದಾಣ ನಿರ್ಮಾಣದ ಬಗ್ಗೆ**

**ಶ್ರೀ ತಿಪ್ಪಣ್ಣ ಕಮಕನೂರ (ನಾಮನಿರ್ದೇಶನ ಹೊಂದಿದವರು):–**

೪೧೪ (೪೨೧) ಮಾನ್ಯ ಪೌರಾಡಳಿತ ಮತ್ತು ಸ್ಥಳೀಯ ಸಂಸ್ಥೆಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ವಿಮಾನ ನಿಲ್ದಾಣ ನಿರ್ಮಾಣ ಕಾರ್ಯ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ ಯೋಜನೆಯ ಸಂಪೂರ್ಣ ಮಾಹಿತಿ ನೀಡುವುದು;

(ಇ) ಇದುವರೆಗೂ ಪೂರ್ಣಗೊಂಡಿರುವ ಕಾಮಗಾರಿಗಳು ಯಾವುವು;

(ಈ) ಇನ್ನೂ ಬಾಕಿ ಇರುವ ಕಾಮಗಾರಿಗಳು ಯಾವುವು;

(ಉ) ವಿಮಾನ ನಿಲ್ದಾಣದ ಒಟ್ಟು ವೆಚ್ಚ ಎಷ್ಟು; ಇದುವರೆಗೂ ಖರ್ಚಾಗಿರುವ ಹಣ ಎಷ್ಟು;

(ಊ) ಯಾವ ಕಾಲಮಿತಿಯೊಳಗೆ ಈ ಕಾಮಗಾರಿ ಪೂರ್ಣಗೊಂಡು ವಿಮಾನ ಹಾರಾಟ ಪ್ರಾರಂಭಿಸಲಾಗುವುದು ? ( ಸಮಗ್ರ ಮಾಹಿತಿ ನೀಡುವುದು)

## ಕಲಬುರಗಿ ನಗರಕ್ಕೆ ನೀರು ಸರಬರಾಜು ಮಾಡುವ ಬಗ್ಗೆ

**ಶ್ರೀ ತಿಪ್ಪಣ್ಣ ಕಮಕನೂರ (ನಾಮನಿರ್ದೇಶನ ಹೊಂದಿದವರು):–**

೪೧೫ (೪೨೨) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ನಗರಕ್ಕೆ ನೀರು ಸರಬರಾಜು ಮಾಡುವ ಮೂಲಗಳಾವುವು;

(ಆ) ಈ ಮೂಲಗಳಿಂದ ಎಷ್ಟು ಪ್ರಮಾಣದಲ್ಲಿ ನೀರು ಸರಬರಾಜು ಆಗುತ್ತಿದೆ;

(ಇ) ನಗರದ ಕುಡಿಯುವ ನೀರಿನ ಬೇಡಿಕೆ ಎಷ್ಟು ;

(ಈ) ನಗರದ ಕುಡಿಯುವ ನೀರಿನ ಸಮಸ್ಯೆಯನ್ನು ಶಾಶ್ವತವಾಗಿ ಪರಿಹರಿಸುವುದಕ್ಕೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಕಲಬುರಗಿ ಪೊಲೀಸ್ ಆಯುಕ್ತಾಲಯದ ಹುದ್ದೆಗಳ ಬಗ್ಗೆ

**ಶ್ರೀ ತಿಪ್ಪಣ್ಣ ಕಮಕನೂರ (ನಾಮನಿರ್ದೇಶನ ಹೊಂದಿದವರು):–**

೪೧೬ (೪೨೩) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿಗೆ ಮಂಜೂರಾಗಿದ್ದ ಪೊಲೀಸ್ ಆಯುಕ್ತಾಲಯ ಕಛೇರಿಗೆ ಮಂಜೂರಾದ ಹುದ್ದೆಗಳ ಸಂಖ್ಯೆ ಎಷ್ಟು ; (ಹುದ್ದೆವಾರು ಮಾಹಿತಿ ನೀಡುವುದು)

(ಆ) ಖಾಲಿ ಇರುವ ಹುದ್ದೆಗಳ ಭರ್ತಿಗೆ ಸರ್ಕಾರದಿಂದ ಕೈಗೊಳ್ಳಲಾದ ಕ್ರಮಗಳೇನು? (ವಿವರ ನೀಡುವುದು)

## ಬೀದರ್ ನಗರಕ್ಕೆ ದಿನದ ೨೪ ಘಂಟೆಗಳ ನೀರು ಪೂರೈಕೆ ನೀಡುವ ಕುರಿತು

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೪೧೭ (೫೬೬) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ನಗರದಲ್ಲಿ ದಿನದ ೨೪ ಘಂಟೆ ಕುಡಿಯುವ ನೀರು ಪೂರೈಸುವ ಯೋಜನೆಯಡಿ ಎಷ್ಟು ವಾರ್ಡ್‌ಗಳಿಗೆ ನೀರು ಸರಬರಾಜು ಮಾಡಲಾಗುತ್ತಿದೆ; ಎಷ್ಟು ದಿನಕೊಮ್ಮೆ ನೀರು ಕೊಡಲಾಗುತ್ತಿದೆ; ನೀರು ಪೂರೈಕೆ ಸಮರ್ಪಕವಾಗಿ ಆಗುತ್ತಿಲ್ಲದಿರುವ

ಬಗ್ಗೆ ದೂರುಗಳು ಇವೆ; ಇದನ್ನು ಸುಧಾರಿಸಲು ಏನು ಕ್ರಮ ಕೈಗೊಳ್ಳಲಾಗಿದೆ; ಬೀದರ್ ನಗರದ ಎಲ್ಲಾ ವಾರ್ಡ್‌ಗಳಿಗೆ ದಿನದ ೨೪ ಘಂಟೆ ನೀರು ಪೂರೈಕೆ ಆಗುವುದು ಯಾವಾಗ;

(ಆ) ಬೀದರ್ ನಗರದಲ್ಲಿ ಒಳಚರಂಡಿ ಕಾಮಗಾರಿ ಪೂರ್ಣವಾಗಿದೆಯೇ; ಪೂರ್ಣವಾಗದಿದ್ದರೆ ವಿಳಂಬಕ್ಕೆ ಕಾರಣವೇನು; ಎಷ್ಟು ದಿನಗಳಲ್ಲಿ ಪೂರ್ಣವಾಗಲಿದೆ ಕಾಮಗಾರಿಗೆ ಇದುವರೆಗೆ ಖರ್ಚಾಗಿರುವ ಅನುದಾನ ಎಷ್ಟು ?

## 'ಇ' ಖಾತೆ ಕುರಿತು

**ಶ್ರೀ ಯು. ಬಿ. ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು):–**

೪೧೮ (೪೧೫) ಮಾನ್ಯ ಪೌರಾಡಳಿತ ಮತ್ತು ಸ್ಥಳೀಯ ಸಂಸ್ಥೆಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಲ್ಲಿ ರಾಮನಗರ ನಗರಸಭೆಯಲ್ಲಿ "ಇ" ಖಾತೆಗಾಗಿ (ನಮೂನೆ–೩) ಕೋರಿ ಬಂದ ಅರ್ಜಿದಾರರ ಹೆಸರು, ವಾರ್ಡ್ ಸಂಖ್ಯೆ, ಖಾತೆ ಸಂಖ್ಯೆ, ಅರ್ಜಿ ಸಲ್ಲಿಸಿದ ದಿನಾಂಕ, ಮತ್ತು (ನಮೂನೆ–೩) ನೀಡಿದ ದಿನಾಂಕಗಳ ಮಾಹಿತಿ ನೀಡುವುದು;

(ಆ) ರಾಮನಗರ ನಗರಸಭೆಯಲ್ಲಿ "ಇ" ಖಾತೆಯನ್ನು ಕೋರಿ ಅರ್ಜಿ ಸಲ್ಲಿಸಿದವರಿಗೆ ಇ–ಖಾತೆ ನೀಡದೆ ವಿಳಂಬ ಮಾಡುತ್ತಿರುವುದರಿಂದ ನಾಗರಿಕರಿಗೆ ತೊಂದರೆಯಾಗುತ್ತಿರುವುದು ನಿಜವೇ;

(ಇ) ಹಾಗಿದ್ದಲ್ಲಿ, ಶೀಘ್ರವಾಗಿ "ಇ" ಖಾತೆಯನ್ನು ನಿರ್ದಿಷ್ಟ ಕಾಲಾವಧಿಯಲ್ಲಿ ವಿತರಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದೇ ?

## ಪೊಲೀಸ್ ಇಲಾಖೆಯಲ್ಲಿ ವಶ ಪಡೆದಿರುವ ವಾಹನಗಳ ಬಗ್ಗೆ

**ಶ್ರೀ ಸಿ. ಆರ್. ಮನೋಹರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೪೧೯ (೪೩೫) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಪೊಲೀಸ್ ಇಲಾಖೆಯು ಹಲವಾರು ಪ್ರಕರಣಗಳಲ್ಲಿ ವಶಕ್ಕೆ ಪಡೆದಿರುವ ದ್ವಿಚಕ್ರ, ತ್ರಿಚಕ್ರ, ಲಘು ಮತ್ತು ಭಾರಿ ಮೋಟಾರ್ ವಾಹನಗಳ ಸಂಖ್ಯೆಯೆಷ್ಟು;

(ಆ) ಇಂತಹ ವಾಹನಗಳು ಬಹಳಷ್ಟು ವರ್ಷಗಳಿಂದ ಪೊಲೀಸ್ ಇಲಾಖೆಯ ವಶದಲ್ಲಿದ್ದು ಹಾಳಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈ ರೀತಿ ನಷ್ಟವಾಗುತ್ತಿರುವುದನ್ನು ತಡೆಯುವುದಕ್ಕೆ ಯಾವುದಾದರೊಂದು ಯೋಜನೆಯನ್ನು ರೂಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; (ಯೋಜನೆಯ ಮಾಹಿತಿ ನೀಡುವುದು)

(ಈ) ಹಾಗಿಲ್ಲದಿದ್ದಲ್ಲಿ, ರಾಷ್ಟ್ರೀಯ ನಷ್ಟವಾಗುತ್ತಿರುವುದನ್ನು ತಡೆಯುವ ಯೋಜನೆಯನ್ನು ರೂಪಿಸಲು ಸರ್ಕಾರಕ್ಕಿರುವ ತೊಂದರೆಗಳೇನು ? (ಮಾಹಿತಿ ನೀಡುವುದು)

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳ ವಸತಿ ಯೋಜನೆಗಳ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೪೨೦ (೪೪೫) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೬–೧೭, ೨೦೧೭–೧೮, ೨೦೧೮–೧೯, ೨೦೧೯–೨೦ನೇ ಸಾಲಿನಲ್ಲಿ ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಿಗೆ ರಾಜೀವ್

ಗಾಂಧಿ ವಸತಿ ನಿಗಮದಿಂದ ವಿವಿಧ ಯೋಜನೆಗಳಡಿಯಲ್ಲಿ ಮಂಜೂರಾದ ಮನೆಗಳೆಷ್ಟು;

(ಆ) ಈ ಮೇಲ್ಕಂಡ ಜಿಲ್ಲೆಗಳಿಗೆ ಮೇಲ್ಕಂಡ ಸಾಲಿನಲ್ಲಿ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ; (ಸಂಪೂರ್ಣ ವಿವರ ನೀಡುವುದು)

(ಇ) ಇದರಲ್ಲಿ ಕೇಂದ್ರ ಸರ್ಕಾರದ ಮತ್ತು ರಾಜ್ಯ ಸರ್ಕಾರದ ಪಾಲು ಎಷ್ಟು ? (ಯೋಜನಾವಾರು, ವರ್ಷಾವಾರು, ವಿಧಾನ ಸಭಾ ಕ್ಷೇತ್ರಾವಾರು ವಿವರ ನೀಡುವುದು)

**ಕೆ. ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ (ಪ್ರ)
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. 088/400 ಪ್ರತಿಗಳು/15–07–2019